# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 77 | ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | ಚಿತ್ರದುರ್ಗ | ದಿನಾಂಕ: 30–09–2023 ಶನಿವಾರ | ಪುಟ: 4 | ಬೆಲೆ : ರೂ.2–00

Volume - 01 Issue - 77 | Title- Code: KARKAN 28269 | Chitradurga | Date: 30-09-2023 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

66 ನೇ ವರ್ಷದ ಪ್ರಸನ್ನ ಗಣಪತಿಯ ಮೆರವಣಿಗೆ ಮಹೋತ್ಸವಕ್ಕೆ ಶಾಸಕ ವೀರೇಂದ್ರ ಪಪ್ಪಿ ಚಾಲನೆ 2

ತಜ್ಞರ ತಂಡದ ಜತೆ ಚರ್ಚೆ ಬಳಿಕ ತೀರ್ಮಾನ: ಮುಖ್ಯಮಂತ್ರಿ ಸಿದ್ದರಾಮಯ್ಯ 3

ಅ.3ರಂದು ಪ್ರಧಾನ ಮಂತ್ರಿ ಸ್ವನಿಧಿ ಯೋಜನೆಗೆ ಚಾಲನೆ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಜಿ.ಪಂ ಮಾಸಿಕ ಕೆಡಿಪಿ ಸಭೆ: ಅ.7ಕ್ಕೆ ಮುಂದೂಡಿಕೆ

ಚಿತ್ರದುರ್ಗ: ಚಿತ್ರದುರ್ಗ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಸೆಪ್ಟೆಂಬರ್ 30ರಂದು ಮಧ್ಯಾಹ್ನ 3ಕ್ಕೆ ಬೆಂಗಳೂರು ವಿಭಾಗದ ಪ್ರಾದೇಶಿಕ ಆಯುಕ್ತರು ಹಾಗೂ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಮತ್ತು ಜಿ.ಪಂ ಆಡಳಿತಾಧಿಕಾರಿ ಅಮಲಾನ್ ಆದಿತ್ಯ ಬಿಸ್ವಾಸ್ ಅಧ್ಯಕ್ಷತೆಯಲ್ಲಿ ನಡೆಯಬೇಕಿದ್ದ ಜಿ.ಪಂ ಮಾಸಿಕ ಕೆಡಿಪಿ ಸಭೆಯನ್ನು ಕಾರಣಾಂತರಗಳಿಂದ ಅಕ್ಟೋಬರ್ 7 ರಂದು ಮಧ್ಯಾಹ್ನ 3ಕ್ಕೆ ಮುಂದೂಡಲಾಗಿದೆ ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಯೋಜನಾಧಿಕಾರಿ ಸತೀಶ್ ರೆಡ್ಡಿ ತಿಳಿಸಿದ್ದಾರೆ.

### ಅಲ್ಪಸಂಖ್ಯಾತ ವಿದ್ಯಾರ್ಥಿ ವೇತನಕ್ಕೆ ಅರ್ಜಿ ಆಹ್ವಾನ

ಚಿತ್ರದುರ್ಗ: 2023–24ನೇ ಸಾಲಿನ 1ನೇ ರಿಂದ 8ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ಅರ್ಹ ಅಲ್ಪಸಂಖ್ಯಾತರ (ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ಧ, ಸಿಖ್ ಮತ್ತು ಪಾರ್ಸಿ) ಸಮುದಾಯದ ವಿದ್ಯಾರ್ಥಿಗಳಿಗೆ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ವೇತನಕ್ಕೆ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ 2023ರ ನವೆಂಬರ್ 30 ಆಗಿರುತ್ತದೆ. ವಿದ್ಯಾರ್ಥಿ ವೇತನ ಪೋರ್ಟಲ್ https://ssp.karnataka.gov.in ವೆಬ್‌ಸೈಟ್ ಮೂಲಕ ಅರ್ಜಿ ಸಲ್ಲಿಸಬಹುದು ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಜಿಲ್ಲಾ ಅಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸೆ.30ರಂದು ಹೊಳಲ್ಕೆರೆ ಪಟ್ಟಣ ಗಣೇಶ ವಿಸರ್ಜನಾ ಶೋಭಾಯಾತ್ರೆ : ಸಂಚಾರ ಮಾರ್ಗ ಬದಲು

ಚಿತ್ರದುರ್ಗ: ಇದೇ ಸೆಪ್ಟೆಂಬರ್ 30ರಂದು ಹೊಳಲ್ಕೆರೆ ಪಟ್ಟಣದ ಶ್ರೀ ವಿಶ್ವ ಹಿಂದೂ ಮಹಾ ಗಣಪತಿ ಸಮಿತಿಯಿಂದ ಗಣೇಶ ವಿಸರ್ಜನಾ ಮತ್ತು ಬೃಹತ್ ಶೋಭಾಯಾತ್ರೆ ಹಮ್ಮಿಕೊಳ್ಳಲಾಗಿದೆ. ಈ ಹಿನ್ನಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ 369ರ ವಾಹನ ಸುಗಮ ಸಂಚಾರಕ್ಕೆ ಅಡ್ಡಿಯಾಗದಂತೆ ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆವರೆಗೆ ಸಂಚಾರ ಮಾರ್ಗ ಬದಲಾವಣೆ ಮಾಡಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಆದೇಶ ಹೊರಡಿಸಿದ್ದಾರೆ.

ಚಿತ್ರದುರ್ಗದಿಂದ ಶಿವಮೊಗ್ಗಕ್ಕೆ ತೆರಳುವ ವಾಹನಗಳು ಚಿತ್ರಹಳ್ಳಿ ಗೇಟ್‌ನಿಂದ ವಿಭಾಗವಾಗಿ ಹೊಸದುರ್ಗಕ್ಕೆ ರಸ್ತೆಯಲ್ಲಿ ಸಂಚರಿಸಿ ಹೆಚ್.ಡಿ.ಪುರ ಮಾರ್ಗವಾಗಿ ಹೋಗುವುದು. ಶಿವಮೊಗ್ಗಕ್ಕೆ ಚಿಕ್ಕಜಾಜೂರು ಮಾರ್ಗವಾಗಿ ಹೊಳಲ್ಕೆರೆ ರೈಲ್ವೆ ಸ್ಟೇಷನ್ ಮುಖಾಂತರ ಹೋಗುವುದು.

ಹೊಸದುರ್ಗದಿಂದ ಶಿವಮೊಗ್ಗಕ್ಕೆ ಹೋಗುವ ವಾಹನಗಳು ಅವಿನಹಟ್ಟಿ ಗ್ರಾಮದ ಮುಖಾಂತರ ಚಲಿಸಿ ಅರೇಹಳ್ಳಿ ರೈಲ್ವೇ ಸ್ಟೇಷನ್ ಮುಖಾಂತರ ಶಿವಮೊಗ್ಗಕ್ಕೆ ಹೋಗುವುದು.ಶಿವಮೊಗ್ಗದಿಂದ ಬರುವ ವಾಹನಗಳು ಅರೇಹಳ್ಳಿ ರೈಲ್ವೇ ಸ್ಟೇಷನ್‌ನಲ್ಲಿ ವಿಭಾಗವಾಗಿ ಚಿತ್ರದುರ್ಗ ಹೋಗುವ ವಾಹನಗಳು ಪೂಣಜೂರು, ಮಲ್ಲಾಪುರ, ಚಿಕ್ಕಜಾಜೂರು, ಬಿ.ದುರ್ಗ,ಭೀಮಸಮುದ್ರಮಾರ್ಗವಾಗಿಚಿತ್ರದುರ್ಗ ಹೋಗುವುದು. ಹೊಸದುರ್ಗಕ್ಕೆ ಹೋಗುವ ವಾಹನಗಳು ಮಾಳೇನಹಳ್ಳಿ, ಅವಳೇಹಟ್ಟಿ, ಹೊಳಲ್ಕೆರೆ ಮುಖಾಂತರ ಹೊಸದುರ್ಗಕ್ಕೆ ಹೋಗುವುದು. ದಾವಣಗೆರೆಯಿಂದ ಬರುವ ವಾಹನಗಳು ಮಲ್ಲಾಪುರ, ಅರೇಹಳ್ಳಿ ರೈಲ್ವೆ ಸ್ಟೇಷನ್ ಮುಖಾಂತರ ಹೊಳಲ್ಕೆರೆಗೆ ಹೋಗುವುದು.

### ರಾಷ್ಟ್ರೀಯ ಹೆದ್ದಾರಿ ಗಸ್ತು ವಾಹನ ಚಾಲಕನಿಗೆ ಡಿಕ್ಕಿ ಹೊಡೆದು ಲಾರಿ ಪರಾರಿ

» ಚಳ್ಳಕೆರೆ

ನಗರದ ರಾಷ್ಟ್ರೀಯ ಹೆದ್ದಾರಿ ಬಳ್ಳಾರಿ ರಸ್ತೆ ಬಡ್ನಹಟ್ಟಿ ಬಳಿ ಕರ್ತವ್ಯನಿರತ ಪೊಲೀಸ್ ಜೀಪ್ ಚಾಲಕ ಗೊಡಬನಾಳು ಚೇತನ್(26) ಯಾವುದೋ ಲಾರಿ ಡಿಕ್ಕಿ ಹೊಡೆದು ಪರಾರಿಯಾಗಿದೆ. ರಾಷ್ಟ್ರೀಯ ಹೆದ್ದಾರಿ ಗಸ್ತು ವಾಹನ ತಪಾಸಣೆ ನಡೆಸುವ ಸಂದರ್ಭದಲ್ಲಿ ಈ ಅವಘಡ ನಡೆದಿದೆ.

ಗಸ್ತು ವಾಹನದಲ್ಲಿದ್ದ ಎಎಸ್‌ಐ ಮಂಜುನಾಥ ಲಾರಿಯನ್ನು ಪತ್ತೆಹಚ್ಚಲು ಶ್ರಮಿಸಿದರೂ ಸಾಧ್ಯವಾಗಲಿಲ್ಲ. ಗಾಯಗೊಂಡ ಚೇತನ್‌ಗೆ ಇಲ್ಲಿನ ಸಾರ್ವಜನಿಕ ಆಸ್ಪತ್ರೆಗೆ ಚಿಕಿತ್ಸೆ ನೀಡಿ ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲು ಮಾಡಲಾಗಿದೆ. ಪೊಲೀಸರು ತನಿಖೆ ಮುಂದುವರೆಸಿದ್ದಾರೆ.

## ಚಿತ್ರದುರ್ಗದಲ್ಲಿ ಎಂದಿನಂತೆ ಜನಜೀವನ

# ರಾಜ್ಯ ಬಂದ್‌ಗೆ ಮಿಶ್ರಪ್ರತಿಕ್ರಿಯೆ









» ಚಿತ್ರದುರ್ಗ

ನೆರೆಯ ರಾಜ್ಯ ತಮಿಳುನಾಡಿಗೆ ಪ್ರತಿನಿತ್ಯವೂ ಕಾವೇರಿ ನೀರು ಹರಿಸುತ್ತಿರುವುದನ್ನು ವಿರೋಧಿಸಿವಿವಿಧಜನಪರಸಂಘಟನೆಗಳು, ಹೋರಾಟಗಾರರು, ರೈತರು ಶುಕ್ರವಾರ ಕರ್ನಾಟಕ ಬಂದ್‌ಗೆ ಕರೆ ನೀಡಿರುವುದನ್ನು ಬೆಂಬಲಿಸಿ ನಡೆಸಿದ ಚಿತ್ರದುರ್ಗ ಬಂದ್ ಭಾಗಶಃವಾಗಿತ್ತು. ಮುಖ್ಯ ರಸ್ತೆಗಳಲ್ಲಿ ಅಂಗಡಿ ಮುಂಗಟ್ಟುಗಳು ಮುಚ್ಚಿದ್ದು, ಶಾಲಾ–ಕಾಲೇಜು, ಸರ್ಕಾರಿ ಕಚೇರಿ, ಬ್ಯಾಂಕ್‌ಗಳು ಎಂದಿನಂತೆ ತೆರೆದಿದ್ದವು. ಸರ್ಕಾರಿ, ಖಾಸಗಿ ಬಸ್‌ಗಳು ಹಾಗೂ ಆಟೋರಿಕ್ಷಾಗಳು ಮಾಮೂಲಿನಂತೆ ಸಂಚರಿಸುತ್ತಿದ್ದವು.

ಗಾಂಧಿವೃತ್ತದಲ್ಲಿ ಬೆಳಿಗ್ಗೆಯೇ ಜಮಾಯಿಸಿದ್ದ ಕಾರ್ಮಿಕ ಮುಖಂಡರು, ರೈತರು, ವಿವಿಧ ಸಂಘಟನೆಗಳ ಹೋರಾಟಗಾರರು ರಾಜ್ಯ ಸರ್ಕಾರದ ವಿರುದ್ದ ಧಿಕ್ಕಾರಗಳನ್ನು ಕೂಗಿದರು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ತಮಿಳುನಾಡಿನ ಮುಖ್ಯಮಂತ್ರಿ ಸ್ಟಾಲಿನ್ ಭಾವಚಿತ್ರಕ್ಕೆ ರಕ್ತದ ಅಭಿಷೇಕ ಮಾಡಿದ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್ ಹಾಗೂ ಮಹಿಳಾ ಅಧ್ಯಕ್ಷೆ ವೀಣಗೌರಣ್ಣ ಮತ್ತು ಪದಾಧಿಕಾರಿಗಳನ್ನು ಪೊಲೀಸರು ಬಂಧಿಸಿ ವ್ಯಾನ್‌ನಲ್ಲಿ ಕರೆದೊಯ್ದರು.ಚಿತ್ರದುರ್ಗ ಸಂಸದ ಎ.ನಾರಾಯಣಸ್ವಾಮಿರವರ ಅಣುಕು ಶವಯಾತ್ರೆ ನಡೆಸಲು ಹೊರಟ ಕರ್ನಾಟಕ ರಕ್ಷಣಾ ವೇದಿಕೆ ಪ್ರವೀಣ್‌ಕುಮಾರ್‌ಶೆಟ್ಟಿ ಬಣದ ಜಿಲ್ಲಾಧ್ಯಕ್ಷ ಎಸ್.ಕೆ.ಮಹಂತೇಶ್ ಮತ್ತಿತರರನ್ನು ಪೊಲೀಸರು ಬಂಧಿಸಿದರು.ಭಾರತ ಕಮ್ಯುನಿಸ್ಟ್ ಪಕ್ಷ ಜಿಲ್ಲಾ ಮಂಡಳಿ ಕಾರ್ಯದರ್ಶಿ ಕಾಂ.ಜಿ.ಸಿ.ಸುರೇಶ್‌ಬಾಬು ಗಾಂಧಿವೃತ್ತದಲ್ಲಿ ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡುತ್ತ ದೇಶದಲ್ಲಿ 95 ಕೋಟಿ ಕಾರ್ಮಿಕರು, ರೈತರಿದ್ದಾರೆ. ರೈತರು ಕಾರ್ಮಿಕರ ಪರವಾಗಿದ್ದೇವೆಂದು ಹೇಳಿಕೊಳ್ಳುತ್ತಿರುವ ರಾಜ್ಯ ಸರ್ಕಾರ ಪ್ರತಿ ವರ್ಷವೂ ಕರ್ನಾಟಕದ ರೈತರ ಹಿತ ಕಡೆಗಣಿಸಿ ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವುದು ಎಷ್ಟರ ಮಟ್ಟಿಗೆ ಸರಿ ಎಂದು ಪ್ರಶ್ನಿಸಿದರು?ಮುಂದಿನ ವರ್ಷ ಲೋಕಸಭಾ ಚುನಾವಣೆ ಎದುರಾಗಲಿದೆ. ಆಗ ಕಾರ್ಮಿಕರು, ರೈತರು ಕಾಂಗ್ರೆಸ್ ಮತ್ತು ಕೇಂದ್ರದ ಬಿಜೆಪಿ. ಸರ್ಕಾರದ ವಿರುದ್ದ ಮತ ಚಲಾಯಿಸಿ ಪರ್ಯಾಯ ಪಕ್ಷವನ್ನು ಅಧಿಕಾರಕ್ಕೆ ತರಲಾಗುವುದು. ಈಗಲಾದರೂ ಆಳುವ ಸರ್ಕಾರಗಳು ಎಚ್ಚೆತ್ತುಕೊಂಡು ರೈತರ ಹಾಗೂ ಕಾರ್ಮಿಕ ಹಿತ ಕಾಪಾಡಬೇಕೆಂದು ಎಚ್ಚರಿಸಿದರು.

ಕರ್ನಾಟಕ ಸರ್ವೋದಯ ಪಕ್ಷದ ಜಿಲ್ಲಾಧ್ಯಕ್ಷ ಜೆ.ಯಾದವರೆಡ್ಡಿ ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿ ಇತ್ತೀಚಿನ ದಿನಗಳಲ್ಲಿ ಕರ್ನಾಟಕದಲ್ಲಿ ಜಲಕ್ಕೆ ಅನ್ಯಾಯವಾಗುತ್ತಿದ್ದರೂ ಆಳುವ ಪಕ್ಷಗಳು ಸುಮ್ಮನಿರುವುದು ನೋವಿನ ಸಂಗತಿ. ಕಾಂಗ್ರೆಸ್, ಬಿಜೆಪಿ, ಜೆಡಿಎಸ್. ಪಕ್ಷಗಳು ಅಸಹಾಯಕವಾಗಿರುವುದರಿಂದ ಜನಸಾಮಾನ್ಯರೆ ಬೀದಿಗಿಳಿದು ಹೋರಾಟ ಮಾಡುವಂತಪರಿಸ್ಥಿತಿಎದುರಾಗಿದೆ.ರಾಜ್ಯದ ಉಪ ಮುಖ್ಯಮಂತ್ರಿ ಜಲಸಂಪನ್ಮೂಲ ಸಚಿವ ಡಿ.ಕೆ.ಶಿವಕುಮಾರ್ ತಮಿಳುನಾಡಿಗೆ ಕಾವೇರಿ ನೀರು ಬಿಡುವುದಾಗಿ ನಗು ನಗುತ್ತಾ ಹೇಳುತ್ತಿರುವುದು ರಾಜ್ಯದ ಸಮಸ್ತ ಕನ್ನಡಿಗರಿಗೆ ಅವಮಾನವಾದಂತಾಗಿದೆ. ಕೂಡಲೆ ತಮ್ಮ ಸ್ಥಾನಕ್ಕೆ ರಾಜೀನಾಮೆ ನೀಡಿ ಹೊರಬರಬೇಕೆಂದು ಒತ್ತಾಯಿಸಿದರು.

ಕಾವೇರಿ ಉಳಿವಿಗಾಗಿ ರಾಜ್ಯದಲ್ಲಿ ಕನ್ನಡಿಗರೆ ಹೋರಾಟ ಮಾಡಬಾರದೆನ್ನುವುದಾದರೆ ಕರ್ನಾಟಕದ ಪರ ತಮಿಳುನಾಡಿನವರು ಹೋರಾಟ ಮಾಡಬೇಕಾ? ರಾಜ್ಯ ಸರ್ಕಾರ ಇಂತಹ ತಿಕ್ಕಲುತನವನ್ನು ಬಿಡಬೇಕು. ಅವೈಜ್ಞಾನಿಕ ತಪ್ಪು ನಿರ್ಧಾರಗಳನ್ನು ತೆಗೆದುಕೊಂಡಿರುವುದರಿಂದ ಜನರೆ ಬೀದಿಗಿಳಿಯಬೇಕಾಗಿದೆ. ರಾಜ್ಯದೆಲ್ಲೆಡೆ ಹೋರಾಟಗಾರರನ್ನು ಬಂಧಿಸಿ ಪ್ರಜಾಪ್ರಭುತ್ವವನ್ನು ಕಗ್ಗೊಲೆ ಮಾಡಲಾಗುತ್ತಿದೆ. ರಾಜಕಾರಣಿಗಳು ತಮ್ಮ ವೈಯಕ್ತಿಕ ಹಿತಾಸಕ್ತಿಗೆ ರಾಜ್ಯದ ಜನರನ್ನು ಬಲಿಕೊಡುವುದು ಸರಿಯಲ್ಲ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಮಹದಾಯಿ, ಕೃಷ್ಣ, ಕಾವೇರಿಯನ್ನು ರಾಜ್ಯ ಸರ್ಕಾರ ಬಿಡಿ ಬಿಡಿಯಾಗಿ ನೋಡುವುದು ಬೇಡ. ಸಮಾನವಾಗಿ ಕಂಡು ಉಳಿವಿಗಾಗಿ ಗಂಭೀರ ಚಿಂತನೆ ನಡೆಸಬೇಕು. ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಿ ಎರಡು ರಾಜ್ಯಗಳ ನಡುವೆ ಸಮನ್ವಯತೆ ಕಾಪಾಡಿಕೊಂಡು ಕಾವೇರಿ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಂಡುಕೊಳ್ಳಬೇಕು. ಅಲ್ಲಿಯತನಕ ನಮ್ಮ ಹೋರಾಟ ನಿರಂತರವಾಗಿರುತ್ತದೆಂದು ಹೇಳಿದರು.ಕಾರ್ಮಿಕ ಮುಖಂಡರುಗಳಾದ ಬಿ.ಬಸವರಾಜಪ್ಪ, ಟಿ.ಆರ್.ಉಮಾಪತಿ, ಜಯದೇವಮೂರ್ತಿ, ರಾಜಪ್ಪ, ಈ.ಸತ್ಯಕೀರ್ತಿ,ತಿಪ್ಪೇಸ್ವಾಮಿ,ರವಿಕುಮಾರ್, ಬಾಬು, ಚಂದ್ರಪ್ಪ, ದುರುಗೇಶ್, ಕರ್ನಾಟಕ ರಾಜ್ಯ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕ್ಷೇಮಾಭಿವೃದ್ದಿ ಸಂಘದ ರಾಜ್ಯಾಧ್ಯಕ್ಷ ಜೆ.ಮಂಜುನಾಥ್, ರಾಜ್ಯ ಪ್ರಧಾನ ಕಾರ್ಯದರ್ಶಿ ವೈ.ಕುಮಾರ್, ಕೆ.ಗೌಸ್‌ಪೀರ್, ಡಿ.ಈಶ್ವರಪ್ಪ, ತಿಮ್ಮಯ್ಯ, ಇಮಾಂ ಮೊಹಿದ್ದೀನ್, ಸ್ವಾಮಿ ಎಂ.ಆರ್, ರೈತ ಮುಖಂಡರುಗಳಾದ ಡಿ.ಎಸ್.ಹಳ್ಳಿ ಮಲ್ಲಿಕಾರ್ಜುನ್,ಚಿಕ್ಕಪ್ಪನಹಳ್ಳಿ ರುದ್ರಸ್ವಾಮಿ, ಧನಂಜಯ, ಲಕ್ಷ್ಮಿಕಾಂತ್, ಪುಟ್ಟರಂಗಪ್ಪ, ರುದ್ರಪ್ಪ, ತಿಪ್ಪೇಸ್ವಾಮಿ, ಕುಮಾರ್, ಸಿದ್ದಪ್ಪ ಇನ್ನು ಅನೇಕರು ಬಂದ್ ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

ಕರ್ನಾಟಕ ರಕ್ಷಣಾ ವೇದಿಕೆ ಹೆಚ್.ಶಿವರಾಮೇಗೌಡ ಬಣದ ಜಿಲ್ಲಾಧ್ಯಕ್ಷ ಕೆ.ಆರ್.ಮಂಜುನಾಥ್ ಹಾಗೂ ಪದಾಧಿಕಾರಿಗಳು ಬಂದ್‌ಗೆ ಬೆಂಬಲಿಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿದರು.

ನವ ಪ್ರಜಾ ರಕ್ಷಣಾ ವೇದಿಕೆ ಕಾರ್ಯಕರ್ತರು ಬಂದ್‌ಗೆ ಬೆಂಬಲಿಸಿ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಸಿ ಮನವಿ ಅರ್ಪಿಸಿದರು.

ಗಾಂಧಿವೃತ್ತ, ಎಸ್.ಬಿ.ಎಂ.ಸರ್ಕಲ್, ಜಿಲ್ಲಾಧಿಕಾರಿ ವೃತ್ತ, ಕೆ.ಎಸ್.ಆರ್.ಟಿ.ಸಿ. ಖಾಸಗಿ ಬಸ್‌ನಿಲ್ದಾಣಗಳಲ್ಲಿ ಪೊಲೀಸ್ ಭದ್ರತೆಯನ್ನು ನಿಯೋಜಿಸಲಾಗಿತ್ತು.



### ಜಿಲ್ಲಾಡಳಿತಕ್ಕೆ ಜಯ ಕರ್ನಾಟಕ ಮನವಿ

ಕಾವೇರಿ ಮತ್ತು ಮಹಾದಾಯಿ ನದಿ ನೀರಿನ ವಿಚಾರವಾಗಿ ಹಲವು ದಶಕಗಳಿಂದಲೂ ರಾಜ್ಯದಲ್ಲಿ ಹೋರಾಟ ನಡೆಯುತ್ತಿದ್ದು, ತಮಿಳುನಾಡಿಗೆ ಕಾವೇರಿ ನೀರು ಹರಿಸುತ್ತಿರುವ ರಾಜ್ಯ ಸರ್ಕಾರದ ರೈತ ವಿರೋಧಿ ನೀತಿ ಖಂಡಿಸಿ ಶುಕ್ರವಾರ ಕರ್ನಾಟಕ ಬಂದ್‌ಗೆ ವಿವಿಧ ಸಂಘಟನೆಗಳು ಕರೆ ನೀಡಿರುವುದನ್ನು ಬೆಂಬಲಿಸಿ ಜಯ ಕರ್ನಾಟಕ ಸಂಘಟನೆ ಚಿತ್ರದುರ್ಗದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಿ ಜಿಲ್ಲಾಡಳಿತಕ್ಕೆ ಮನವಿ ಸಲ್ಲಿಸಿತು.ಜಯಕರ್ನಾಟಕ ಜಿಲ್ಲಾಧ್ಯಕ್ಷ ಆರ್.ರಾಜೇಶ್‌ಮದರಿ ಮಾತನಾಡಿ ಪ್ರತಿ ವರ್ಷವೂ ಕಾವೇರಿ ನೀರಿಗಾಗಿ ತಮಿಳುನಾಡು ಖ್ಯಾತೆ ತೆಗೆಯುತ್ತಿದ್ದು, ವಿವಾದಕ್ಕೆ ಶಾಶ್ವತ ಪರಿಹಾರ ಕಂಡುಕೊಳ್ಳಲು ಆಗದ ಪರಿಣಾಮ ಹೋರಾಟಗಾರರು, ರೈತರು, ವಿವಿಧ ಜನಪರ ಸಂಘಟನೆಗಳು ಬೀದಿಗಿಳಿದು ಹೋರಾಡಬೇಕಿದೆ. ಕೇಂದ್ರ ಸರ್ಕಾರ ಮಧ್ಯಪ್ರವೇಶಿಸಿ ಕರ್ನಾಟಕ ಮತ್ತು ತಮಿಳನಾಡು ಮಧ್ಯೆ ಏರ್ಪಟ್ಟಿರುವ ಜಲವಿವಾದವನ್ನು ಬಗೆಹರಿಸಲಿ ಎಂದು ಜಿಲ್ಲಾಡಳಿತದ ಮೂಲಕ ವಿನಂತಿಸಿದರು. ಜಯಕರ್ನಾಟಕ ಕಾರ್ಯಾಧ್ಯಕ್ಷ ಅರುಣ್‌ಕುಮಾರ್, ಉಪಾಧ್ಯಕ್ಷ ಬಿ.ಮಂಜುನಾಥ್‌ಸೇನ್, ಬಾಬು, ಪ್ರಕಾಶ್‌ಮಲ್ಲಾಪುರ, ತಾಲ್ಲೂಕು ಅಧ್ಯಕ್ಷ ಸುನಿಲ್‌ಕುಮಾರ್, ಅಭಿಲಾಷ್, ಪ್ರವೀಣ್‌ಕುಮಾರ್, ಹರ್ಬಾಜ್ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

### ವಿಶ್ವ ಪತ್ರಿಕಾ ವಿತರಕರ ದಿನಾಚರಣೆಯಲ್ಲಿ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ

# ಪತ್ರಿಕಾ ವಿತರಕರ ವೃತ್ತಿ ಸ್ವಾಭಿಮಾನಕ್ಕೆ ಪೂರಕ

» ಚಿತ್ರದುರ್ಗ

ಪತ್ರಿಕಾ ವಿತರಕರ ವೃತ್ತಿ ಸ್ವಾಭಿಮಾನಕ್ಕೆ ಪೂರಕವಾದ ವೃತ್ತಿಯಾಗಿದೆ. ಸೂರ್ಯ ಉದಯಿಸುವ ಮುನ್ನವೇ ಕಾರ್ಯ ಪ್ರವೃತ್ತರಾಗಿ ದುಡಿಯುವ ಈ ವರ್ಗ ಆರೋಗ್ಯಭರಿತ ಕಾಯಕಜೀವಿಗಳಾಗಿದ್ದಾರೆ ಎಂದು ಶ್ರೀ ಶಿವಶರಣ ಮಾದಾರ ಚನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ ಹೇಳಿದರು.

ನಗರದ ಪತ್ರಕರ್ತರ ಭವನದಲ್ಲಿ ಶುಕ್ರವಾರ ಕರ್ನಾಟಕ ರಾಜ್ಯ ಪತ್ರಿಕಾ ವಿತರಕರ ಒಕ್ಕೂಟ, ಜಿಲ್ಲಾ ಕಾರ್ಯನಿರತ ಪತ್ರಿಕಾ ಹಂಚಿಕೆದಾರರ, ವಿತರಕರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ಪತ್ರಿಕಾ ವಿತರಕರ ದಿನಾಚರಣೆ ಉದ್ಘಾಟಿಸಿ ಅವರು ಮಾತನಾಡಿದರು.





ಪತ್ರಿಕಾ ವಿತರಕರು ಪತ್ರಿಕೆಯನ್ನು ಮನೆ ಮನೆಗೆ ತಲುಪಿಸಿದಾಗ ಮಾತ್ರ ಪತ್ರಿಕಾ ರಂಗದಲ್ಲಿನ ವರದಿಗಾರರು, ಸಂಪಾದಕರು ಪರಿಶ್ರಮ ಸಾರ್ಥಕವಾಗಲಿದೆ. ಪತ್ರಿಕಾ ಸಂಪಾದಕರ ಜವಾಬ್ದಾರಿ ಎಷ್ಟು ಅಗತ್ಯವಾಗಿರುತ್ತದೆಯೋ ಹಾಗೆಯೇ ಪತ್ರಿಕಾ ವಿತರಕರ ಜವಾಬ್ದಾರಿ ಅದಕ್ಕಿಂತ ಹೆಚ್ಚಿನ ಜವಾಬ್ದಾರಿಯಾಗಿರುತ್ತದೆ. ಮಳೆ, ಚಳಿ, ಗಾಳಿ ಯಾವುದನ್ನು ಲೆಕ್ಕಿಸದೇ ವಾರಿಯರ್ ಆಗಿ ಕೆಲಸ ಮಾಡುವವರು ಪತ್ರಿಕಾ ವಿತರಕರು ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಸಮಾಜದಲ್ಲಿ ಯಾವ ವೃತ್ತಿಯೂ ಕೂಡ ಅವಮಾನಮತ್ತುಅಪಮಾನಕ್ಕೆಒಳಗಾಗುವ ವೃತ್ತಿಯಲ್ಲ. 12ನೇ ಶತಮಾನದಲ್ಲಿ ಎಲ್ಲಾ ಶರಣ–ಶರಣೆಯರು ತಮ್ಮ ತಮ್ಮ ವೃತ್ತಿಗಳ ಆಧಾರದ ಮೇಲೆ ಕಾಯಕ ನಡೆಸುತ್ತಿದ್ದರು. ಯಾವುದೇ ವೃತ್ತಿಗಳು ಸಮಾಜದಲ್ಲಿ ಕೆಳದರ್ಜೆ ಹಾಗೂ ಮೇಲ್ದರ್ಜೆ ಎಂಬ ವಿಭಾಗಗಳನ್ನು ಮಾಡಿ ಮಾತನಾಡುವುದು ಸೂಕ್ತವಲ್ಲ ಎಂದು ಅಭಿಪ್ರಾಯಪಟ್ಟರು.

ನಾನೂ ಕೂಡ ನನ್ನ ವಿದ್ಯಾರ್ಥಿ ಜೀವನದಲ್ಲಿ ಮನೆ ಮನೆಗೆ ಪತ್ರಿಕೆ ಹಂಚಿದ್ದೇನೆ. ಚಹ ಮಾರುವುದು, ಪತ್ರಿಕೆ ವಿತರಣೆ ಮಾಡುವುದು ಅವಮಾನವಲ್ಲ ಅದು ಕೂಡ ಗೌರವ ಕೊಡುವ ಕರ್ತವ್ಯ ಸೇವೆ. ಪತ್ರಿಕಾ ವಿತರಕರ ವೃತ್ತಿ ಸ್ವಾಭಿಮಾನಕ್ಕೆ ಧಕ್ಕೆ ತರುವ ಕೆಲಸವಲ್ಲ. ಸ್ವಾಭಿಮಾನಕ್ಕೆ ಪೂರಕವಾದ ವೃತ್ತಿ. ಮಾನಸಿಕ ಮತ್ತು ದೈಹಿಕ ದೃಷ್ಟಿಯಿಂದ ಸಂಪೂರ್ಣ ಆರೋಗ್ಯಭರಿತ ಸೇವೆಯೇ ಪತ್ರಿಕಾ ವಿತರಣೆ ಸೇವೆ ಎಂದರು.

ಪತ್ರಿಕಾ ವಿತರಿಕಗೆ ಸೇವಾ ಭದ್ರತೆ ಹಾಗೂ ಆರೋಗ್ಯ ವಿಮೆ ಸೇರಿದಂತೆ ವಿವಿಧ ಭದ್ರತೆಗಳನ್ನು ಸರ್ಕಾರಗಳು ನೀಡಿದರೆ ಬಹುಶಃ ನೀವೂ ಕೂಡ ಕಾಳಜಿಯಿಂದ ಸೇವೆ ಮಾಡಲು ಸಾಧ್ಯವಾಗಲಿದೆ. ಪತ್ರಿಕೆಯನ್ನು ಪ್ರಾಮಾಣಿಕವಾಗಿ ಓದುಗರ ಮನೆಗೆ ಮುಟ್ಟಿಸುವ ಜವಾಬ್ದಾರಿಯನ್ನು ಅಳವಡಿಸಿಕೊಳ್ಳಬೇಕು ಎಂದು ಸಲಹೆ ನೀಡಿದರು. ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಮಾತನಾಡಿ, ಪತ್ರಿಕಾ ವಿತರಕರ ಸಮಸ್ಯೆ ತಿಳಿಯಲು ವಿತರಕರ ದಿನಾಚರಣೆ ಸಹಕಾರಿ ಆಗಿದೆ. ನಿತ್ಯವೂ ಪತ್ರಿಕೆಗಳನ್ನು ಮನೆ ಮನೆಗೆ ತಲುಪಿಸುವ ಪತ್ರಿಕಾ ವಿತರಕರು ನಿಜವಾದ ಹೀರೋಗಳಿದ್ದಂತೆ.


ಪುಟ 2

## ಫಾಸ್ಟ್ ನ್ಯೂಸ್

### ಹೊಸ ನ್ಯಾಯಬೆಲೆ ಅಂಗಡಿ ತೆರೆಯಲು ಅರ್ಜಿ ಆಹ್ವಾನ

» **ಚಿತ್ರದುರ್ಗ**

ಚಿತ್ರದುರ್ಗ ತಾಲ್ಲೂಕಿನ ಭರಮಸಾಗರ ಹೋಬಳಿಯ, ಭರಮಸಾಗರ ಗೊಲ್ಲರಹಟ್ಟಿ ಗ್ರಾಮಕ್ಕೆ ಪಡಿತರ ಚೀಟಿದಾರರ ಹಿತದೃಷ್ಟಿಯಿಂದ ಮತ್ತು ಸಾರ್ವಜನಿಕ ವಿತರಣಾ ವ್ಯವಸ್ಥೆಯನ್ನು ಪರಿಣಾಮಕಾರಿಗೊಳಿಸುವ ದೃಷ್ಠಿಯಿಂದ ಹೊಸದಾಗಿ ನ್ಯಾಯಬೆಲೆ ಅಂಗಡಿ ಮಂಜೂರು ಮಾಡಲು ಅರ್ಜಿ ಆಹ್ವಾನಿಸಲಾಗಿದೆ. ಅಕ್ಟೋಬರ್ 26 ಅರ್ಜಿ ಸಲ್ಲಿಸಲು ಕೊನೆಯ ದಿನ.ಆಸಕ್ತರು ನಿಯಮಾನುಸಾರ ನಿಗಧಿತ ನಮೂನೆ-ಎ ಅಗತ್ಯ ದೃಢೀಕೃತ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಚಿತ್ರದುರ್ಗ ಆಹಾರ, ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರಿಗೆ ಸಲ್ಲಿಸಬಹುದು. ನಿಗದಿತ ಅವಧಿಯ ನಂತರ ಬರುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ.ನಿಯಮಾನುಸಾರ ರಾಜ್ಯ ಸರ್ಕಾರಿ ಸ್ವಾಮ್ಯದ ನಿಗಮ, ಸಂಸ್ಥೆ, ಗ್ರಾಮ ಹಾಗೂ ಸ್ಥಳೀಯ ಪಂಚಾಯಿತಿಗಳು, ಕೃಷಿ ಪತ್ತಿನ, ತೋಟಗಾರಿಕೆ, ಪ್ರಾಥಮಿಕ ಬಳಕೆದಾರರು, ಆದಿವಾಸಿ, ನೇಕಾರ, ಮಹಿಳಾ, ಅಂಗವಿಕಲ ಸೇರಿದಂತೆ ವಿವಿಧ ಸಹಕಾರಿ ಸಂಘಗಳು, ಸ್ತ್ರೀ ಶಕ್ತಿ ಹಾಗೂ ಮಹಿಳಾ ಸ್ವಸಹಾಯ ಗುಂಪುಗಳು, ವಿಕಲಚೇತನರು ಹಾಗೂ ತೃತೀಯ ಲಿಂಗಿಗಳನ್ನು ಆದ್ಯತೆ ಮೇರೆಗೆ ಪರಿಗಣಿಸಲಾಗುವುದು. ಅರ್ಜಿ ಸಲ್ಲಿಸುವ ಸಹಕಾರಿ ಸಂಘಗಳು ಕನಿಷ್ಠ 3 ವರ್ಷದ ಹಿಂದೆ ನೋಂದಾಯಿತರಾಗಿರಬೇಕು. ಕನಿಷ್ಠ ರೂ.2 ಲಕ್ಷರೂಪಾಯಿಗಳ ಬ್ಯಾಂಕ್ ಮೊತ್ತ ಬ್ಯಾಲೆನ್ಸ್ ಹೊಂದಿರಬೇಕು. ಇದೇ ಮಾದರಿಯಲ್ಲಿ ಸ್ತ್ರೀ ಸಹಾಯ ಸಂಘಗಳು ರೂ.1 ಲಕ್ಷ ಹಾಗೂ ವಿಕಲಚೇತನರು ಹಾಗೂ ತೃತೀಯ ಲಿಂಗಿಗಳು ಕನಿಷ್ಠ ರೂ.50 ಸಾವಿರ ಬ್ಯಾಂಕ್ ಠೇವಣಿ ಹೊಂದಿರಬೇಕು.ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಕಡ್ಡಾಯವಾಗಿ ಹತ್ತನೇ ತರಗತಿ ಪಾಸಾಗಿರಬೇಕು. (ವಿಕಲಚೇತನರು ಹಾಗೂ ತೃತೀಯ ಲಿಂಗಿಗಳು ಮಾತ್ರ), ಸಹಕಾರ ಸಂಘ, ಸಂಸ್ಥೆಗಳ ಮತ್ತು ಸ್ವಸಹಾಯ ಸಂಘಗಳಾದರೆ ನೋಂದಾವಣೆ ಪತ್ರ, ಸಹಕಾರ ಸಂಘ ಸಂಸ್ಥೆಯಾದರೆ ಕಳೆದ 3 ವರ್ಷಗಳ ದೃಢೀಕೃತ ಲೆಕ್ಕ ಪರಿಶೋಧನಾ ವರದಿ, ಬೈಲಾ, ಪ್ರತನಿಧಿ ನೇಮಕ ನಿರ್ಣಯ, ಅರ್ಜಿ ಸಲ್ಲಿಸಿದ ಸಹಕಾರಿ ಸಂಘದ ಮೇಲೆ ಯಾವುದೆ ವಿಚಾರಣೆ, ಲಿಕ್ವಿಡೇಷನ್ ನಡವಳಿ ನಡೆದಿರುವುದಿಲ್ಲ ಎಂಬ ಬಗ್ಗೆ ಸಕ್ಷಮ ಪ್ರಾಧಿಕಾರಿಯು ನೀಡಿರುವ ದೃಢೀಕರಣ ಪತ್ರ, ವ್ಯಾಪಾರದ ಮಳಿಗೆಯ ಖಾತೆ ಅಥವಾ ಬಾಡಿಗೆ ಕರಾರು ಪತ್ರ, ಹಣಕಾಸು ಹೊಂದಿರುವ ಬಗ್ಗೆ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ, ಸಹಕಾರ ಸಂಘದವರು ಅಧಿಕೃತವಾಗಿ ನೇಮಿಸಿರುವ ಪ್ರತಿನಿಧಿಯ ಇತ್ತೀಚಿನ 3 ಭಾವಚಿತ್ರ, ಅಭ್ಯರ್ಥಿಗಳು ಯಾವುದೇ ಕ್ರಿಮಿನಲ್ ಪ್ರಕರಣಗಳು ಹೊಂದಿಲ್ಲದಿರುವ ಬಗ್ಗೆ ಪೊಲೀಸ್ ಇಲಾಖೆಯಿಂದ ಪೊಲೀಸ್ ವೆರಿಫಿಕೇಷನ್ ರಿಪೋರ್ಟ್‍ನ್ನು ಪಡೆದು ಕಡ್ಡಾಯವಾಗಿ ಸಲ್ಲಿಸಬೇಕು. ವಿಕಲಚೇತನರು ಹಾಗೂ ತೃತೀಯ ಲಿಂಗಿಗಳು ಸಕ್ಷಮ ಪ್ರಾಧಿಕಾರದಿಂದ ಪಡೆದ ದೃಢೀಕರಣ ಪತ್ರ ಸಲ್ಲಿಸಬೇಕು ಎಂದು ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» **ಚಿತ್ರದುರ್ಗ**

ಚಿತ್ರದುರ್ಗ ಗ್ರಾಮೀಣ ಉಪವಿಭಾಗದ ಭರಮಸಾಗರ ಶಾಖಾ ವ್ಯಾಪ್ತಿಯಲ್ಲಿನ ಭರಮಸಾಗರ ವಿದ್ಯುತ್ ವಿತರಣಾ ಕೇಂದ್ರದಲ್ಲಿ 20 ಎಂ.ವಿ.ಎ ಪರಿವರ್ತಕಗಳ ಅಳವಡಿಕೆ ಕಾರ್ಯ ನಡೆಯುವುದರಿಂದ ಸೆಪ್ಟೆಂಬರ್ 30ರಂದು ವಿದ್ಯುತ್ ಸರಬರಾಜಿನಲ್ಲಿ ವತ್ಯಯ ಉಂಟಾಗಲಿದೆ.

### ಸ್ವ-ಉದ್ಯೋಗ ಪ್ರೇರಣಾ ಶಿಬಿರವನ್ನು ಉದ್ಘಾಟಿಸಿದ ದಿನೇಶ್ ಪೂಜಾರಿ



» **ಚಿತ್ರದುರ್ಗ**

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಬಿ.ಸಿ.ಟ್ರಸ್ಟ್ ತಾಲ್ಲೂಕು ಯೋಜನಾ ಕಚೇರಿ ವತಿಯಿಂದ ತುರುವನೂರು ವಲಯ ಕುಂಬಾರ್ ಬೀದಿ ಕಾರ್ಯಕ್ಷೇತ್ರದಲ್ಲಿರುವ ರಾಮಲಿಂಗೇಶ್ವರ ಸಮುದಾಯ ಭವನದಲ್ಲಿ ಮಹಿಳಾ ಜ್ಞಾನವಿಕಾಸ ಕಾರ್ಯಕ್ರಮದಡಿ ಸ್ವ-ಉದ್ಯೋಗ ಪ್ರೇರಣಾ ಶಿಬಿರ ಇತ್ತೀಚೆಗೆ ನಡೆಯಿತು. ಜಿಲ್ಲಾ ಪಂಚಾಯಿತಿ ಎನ್.ಆರ್.ಎಲ್.ಎಂ. ನಿರ್ದೇಶಕ ಯೋಗೇಶ್ವರಪ್ಪ ಶಿಬಿರ ಉದ್ದೇಶಿಸಿ ಮಾತನಾಡುತ್ತ ಸ್ವ-ಉದ್ಯೋಗವನ್ನು ಹೇಗೆ ಲಾಭದಾಯಕವಾಗಿ ಮಾಡಬಹುದು. ಬೇರೆ ಬೇರೆ ಬ್ಯಾಂಕ್‍ಗಳಲ್ಲಿ ಸಿಗುವ ಸೌಲಭ್ಯಗಳನ್ನು ಪಡೆದುಕೊಂಡು ಸ್ವಾವಲಂಬಿ ಬದುಕು ಕಟ್ಟಿಕೊಳ್ಳುವಂತೆ ಸ್ವ-ಸಹಾಯ ಸಂಘದ ಮಹಿಳೆಯರಿಗೆ ತಿಳಿಸಿದರು.

ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ದಿ ಯೋಜನೆ ಜಿಲ್ಲಾ ನಿರ್ದೇಶಕ ದಿನೇಶ್‍ಪೂಜಾರಿ ಪ್ರೇರಣಾ ಶಿಬಿರ ಉದ್ಘಾಟಿಸಿ ಈಗಿನ ಕಷ್ಟದ ಪರಿಸ್ಥಿತಿಯಲ್ಲಿ ಒಂದು ಕುಟುಂಬ ಸಾಗಿಸಬೇಕಾದರೆ ಗಂಡ-ಹೆಂಡತಿ ಇಬ್ಬರು ದುಡಿಮೆಯಲ್ಲಿ ತೊಡಗಬೇಕು. ಎಂದರು.

## ಡ್ರಾಗನ್ ಹಣ್ಣು: ಚಿತ್ರನಾಯಕನಹಳ್ಳಿ ನಾರಾಯಣರೆಡ್ಡಿಗೆ ಉತ್ತಮ ಆದಾಯ

# ಡ್ರಾಗನ್ ಹಣ್ಣು ಬೆಳೆದು ಯಶಸ್ಸು ಕಂಡ ರೈತ

» **ಚಿತ್ರದುರ್ಗ**





ಜಿಲ್ಲೆಯ ಚಳ್ಳಕೆರೆ ತಾಲ್ಲೂಕು ರಾಜ್ಯದಲ್ಲಿಯೇ ಅತ್ಯಂತ ಕಡಿಮೆ ಮಳೆ ಬೀಳುವ ತಾಲ್ಲೂಕು ಆಗಿದ್ದರೂ ಇಲ್ಲಿನ ರೈತರ ಪ್ರಯೋಗಶೀಲತೆಯಲ್ಲಿ ಕೊರತೆ ಕಾಣದು. ಚಳ್ಳಕೆರೆ ತಾಲ್ಲೂಕಿನ ಚಿತ್ರನಾಯಕನಹಳ್ಳಿ ಗ್ರಾಮದ ಶ್ರೀ ನಾರಾಯಣರೆಡ್ಡಿ ಬಿನ್ ಲೇಟ್ ನಣಜೀವರೆಡ್ಡಿ ರವರು ಕಡಿಮೆ ನೀರಿನಲ್ಲಿ ಉತ್ತಮ ಬೆಳೆ ಕೊಡುವ ಅಪ್ರಧಾನ ಹಣ್ಣಿನ ಜಾತಿಯ ಡ್ರಾಗನ್ ಹಣ್ಣಿನ ಬೆಳೆ ಬೆಳೆದು ಉತ್ತಮ ಆದಾಯ ಗಳಿಸುತ್ತಿದ್ದಾರೆ.

ಈ ಹಿಂದೆ ಇವರು ಇರುವ 2 ಎಕರೆ ಜಮೀನಿನಲ್ಲಿ ಮೆಕ್ಕೆಜೋಳ. ಟೊಮೋಟೋ,ಈರುಳ್ಳಿಬೆಳೆಯುತ್ತಿದ್ದರೂ, ಕಡಿಮೆ ನೀರಿರುವ ಕಾರಣ ಲಾಭ ನಿರೀಕ್ಷಿತ ಮಟ್ಟದಲ್ಲಿ ಬಂದಿರುವುದಿಲ್ಲ. ಆದ ಕಾರಣ ಕಡಿಮೆ ನೀರಿನಲ್ಲಿ ಬೆಳೆಯಬಹುದಾದ ಬೆಳೆಯ ಕುರಿತಾಗಿ ತೋಟಗಾರಿಕೆ ಇಲಾಖೆ ರೈತ ಸಂಪರ್ಕ ಕೇಂದ್ರದ ತೋಟಗಾರಿಕೆ ಅಧಿಕಾರಿ ಅವರಿಂದ ಡ್ರಾಗನ್ ಹಣ್ಣಿನ ಬೆಳೆ ಕುರಿತಾಗಿ ಮಾಹಿತಿ ಪಡೆದು ಮಹಾತ್ಮಗಾಂಧಿ ಉದ್ಯೋಗ ಖಾತರಿ ಯೋಜನೆಯ ಸದುಪಯೋಗ ಪಡೆಯಲು ಆಸಕ್ತಿ ತೋರಿ ಡ್ರಾಗನ್ ಹಣ್ಣಿನ ಬೆಳೆಯನ್ನು ಬೆಳೆದಿದ್ದಾರೆ.

2 ಎಕರೆಯಲ್ಲಿ 10*9 ಅಡಿ ಅಂತರದಲ್ಲಿ ಸುಮಾರು 960 ಕಂಬಗಳನ್ನು ನೆಟ್ಟು 3840 ಸಸಿಗಳನ್ನು ನಾಟಿ ಮಾಡಿರುತ್ತಾರೆ. ರೂ. 55 ಕ್ಕೆ 01 ರಂತೆ ರೋಜ್ ರೆಡ್ ತಳಿಯ ಸಸಿಯನ್ನು ದೊಡ್ಡಬಳ್ಳಾಪುರದಿಂದ ಖರೀದಿ ಮಾಡಿ ಕೊಟ್ಟಿಗೆ ಗೊಬ್ಬರ ಹಾಕಿ ನಾಟಿ ಮಾಡಿರುತ್ತಾರೆ. ಸಸಿ ನಾಟಿ ಮಾಡಿದ ನಂತರ 1.5 ವರ್ಷಕ್ಕೆ ಇಳುವರಿ ಪ್ರಾರಂಭವಾಗಿರುತ್ತದೆ. ಹೂ ಕಚ್ಚಿದ ಸಮಯದಲ್ಲಿ 3-4 ದಿನಗಳಿಗೊಮ್ಮೆ ನೀರು ಹರಿಸಬೇಕು.

ಉಳಿದಂತೆ ವಾರಕೊಮ್ಮೆ ನೀರು ಹರಿಸಿದರೆ ಸಾಕು. ಹೂ ಕಚ್ಚಿದ 1.5 ತಿಂಗಳಿಗೆ ಹಣ್ಣು ಕಟಾವಿಗೆ ಬರುತ್ತದೆ.

ನಾರಾಯಣ ರೆಡ್ಡಿಯವರು ಮೊದಲನೆ ಬೆಳೆ ಹಣ್ಣು ಕಟಾವು ಮಾಡಿ ಬೆಂಗಳೂರು ಮಾರುಕಟ್ಟೆಯಲ್ಲಿ ಬಾಂಬೆ ಕಂಪನಿಯ ಖರೀದಿದಾರರಿಗೆ ಕೆ.ಜಿ.ಗೆ ರೂ.110-120 ರಂತೆ ಮೂರು ಬಾರಿ ಕಟಾವಿನ ಒಟ್ಟು 6 ಟನ್ ಹಣ್ಣನ್ನು ಮಾರಾಟ ಮಾಡಿರುತ್ತಾರೆ. ಒಂದು ಹಣ್ಣಿನ ತೂಕ 400-500 ಗ್ರಾಂ ವರೆಗೂ ಬಂದಿರುತ್ತದೆ. ಮೊದಲನೇ ಬೆಳೆಯಿಂದ ನಾಟಿ ಮಾಡಿದ ಬಂಡವಾಳದ ಹಣವನ್ನು ಪಡೆದಿರುತ್ತಾರೆ. ಮುಂಬರುವ ದಿನಗಳಲ್ಲಿ ಬರುವ ಬೆಳೆಯಿಂದ ಲಾಭದ ಮೊತ್ತದ ನಿರೀಕ್ಷೆಯಲ್ಲಿದ್ದಾರೆ. ಮಹಾತ್ಮಗಾಂಧಿ ನರೇಗಾ ಯೋಜನೆಯಡಿ ಪಡೆದ 1.5 ಲಕ್ಷ ಸಹಾಯಧನದಿಂದ ಪ್ರಾರಂಭಿಕ ಬಂಡವಾಳಕ್ಕೆ ಅನುಕೂಲವಾಗಿರುತ್ತದೆ ಹಾಗೂ ಹನಿ ನೀರಾವರಿ ಒಗ್ಗೂಡಿಸುವಿಕೆ ಅಡಿಯಲ್ಲಿ ಹನಿ ನೀರಾವರಿಗೆ ಸಹಾಯಧನ ಪಡೆದಿರುತ್ತಾರೆ. ಸರ್ಕಾರದ ಯೋಜನೆಗಳ ಸಹಾಯಧನದಿಂದಾಗಿ ಸಾಲದ ಹೊರೆ ಕಡಿಮೆಯಾಗಿ ಪ್ರಾರಂಭಿಕ ಬಂಡವಾಳಕ್ಕೆ ಹೆಚ್ಚಿನ ಅನುಕೂಲವಾಗಿರುವ ಕುರಿತಾಗಿ ಹರ್ಷ ವ್ಯಕ್ತಪಡಿಸಿರುತ್ತಾರೆ. ಜಿಲ್ಲೆಯ ರೈತರಿಗೆ ಸರ್ಕಾರದ ಯೋಜನೆಗಳ ಸದುಪಯೋಗ ಪಡಿಸಿಕೊಳ್ಳಲು ಸಲಹೆ ನೀಡಿರುತ್ತಾರೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 9740153343, 8951820256 ಕ್ಕೆ ರೈತರನ್ನು ಸಂಪರ್ಕಿಸಬಹುದಾಗಿದೆ ಎಂದು ತೋಟಗಾರಿಕೆ ಇಲಾಖೆ ಉಪನಿರ್ದೇಶಕಿ ಸವಿತಾ ತಿಳಿಸಿದ್ದಾರೆ.

## 66 ನೇ ವರ್ಷದ ಪ್ರಸನ್ನ ಗಣಪತಿಯ ಮೆರವಣಿಗೆ ಮಹೋತ್ಸವಕ್ಕೆ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಚಾಲನೆ

» **ಚಿತ್ರದುರ್ಗ**



ನಗರದ ಆನೆಬಾಗಿಲು ಬಳಿಯಿರುವ ಆಂಜನೇಯಸ್ವಾಮಿ ದೇವಸ್ಥಾನದ ಆವರಣದಲ್ಲಿ ಪ್ರತಿಷ್ಠಾಪಿಸಲಾಗಿರುವ 66 ನೇ ವರ್ಷದ ಪ್ರಸನ್ನ ಗಣಪತಿಯ ಮೆರವಣಿಗೆ ಮಹೋತ್ಸವಕ್ಕೆ ಶಾಸಕ ಕೆ.ಸಿ.ವೀರೇಂದ್ರಪಪ್ಪಿರವರು ಶುಕ್ರವಾರ ಸಂಜೆ ಡೊಳ್ಳು ಬಾರಿಸುವ ಮೂಲಕ ಚಾಲನೆ ನೀಡಿದರು.

ಆನೆಬಾಗಿಲಿನಿಂದ ಹೊರಟ ಪ್ರಸನ್ನ ಗಣಪತಿ ಮೆರವಣಿಗೆ ಗಾಂಧಿವೃತ್ತ, ಧರ್ಮಶಾಲಾ ರಸ್ತೆ, ದೊಡ್ಡಪೇಟೆ, ಚಿಕ್ಕಪೇಟೆ, ಬುರುಜನಹಟ್ಟಿ, ಹೊಳಲ್ಕೆರೆ ರಸ್ತೆ ಮೂಲಕ ಸಾಗಿತು. ರಾತ್ರಿ ಹನ್ನೊಂದು ಗಂಟೆಗೆ ಚಂದ್ರವಳ್ಳಿಯಲ್ಲಿ ವಿಸರ್ಜಿಸಲಾಯಿತು.

ನಾಸಿಕ್‍ಡೋಲು, ಡೊಳ್ಳುಕುಣಿತ, ಕೀಲುಕುದರೆ, ಅನೇಕ ಕಲಾ ತಂಡಗಳು, ಶಾರದ ಬ್ರಾಸ್‍ಬ್ಯಾಂಡ್ ಗುರುಮೂರ್ತಿಯವರಿಂದ ವಾದ್ಯಗೋಷ್ಠಿ ಮೆರವಣಿಗೆಯಲ್ಲಿ ಪ್ರಮುಖ ಆಕರ್ಷಣೆಯಾಗಿತ್ತು. ಪ್ರಸನ್ನ ಗಣಪತಿ ಸೇವಾ ಸಮಿತಿ ಅಧ್ಯಕ್ಷ ಗೋಪಾಲ್‍ರಾವ್ ಜಾಧವ್, ಉಪಾಧ್ಯಕ್ಷ ರಾಜ್‍ಕುಮಾರ್, ನಾಗರಾಜ್‍ಬೇದ್ರೆ, ಕಾರ್ಯದರ್ಶಿ ಶಿವಕುಮಾರ್, ಖಜಾಂಚಿ ಆನಂದ್, ನಿರ್ದೇಶಕರುಗಳಾದ ವೆಂಕಟೇಶ್, ಶಂಭು, ಯಶವಂತ್, ಕಾರ್ತಿಕ್, ರಮೇಶ್, ನಾರಾಯಣರಾವ್, ಶ್ಯಾಂಪ್ರಸಾದ್ ಇನ್ನು ಅನೇಕರು ಮೆರವಣಿಗೆಯಲ್ಲಿ ಪಾಲ್ಗೊಂಡಿದ್ದರು.

ಮೆರವಣಿಗೆಯುದ್ದಕ್ಕೂ ನೂರಾರು ಭಕ್ತರು ಜಮಾಯಿಸಿ ಪ್ರಸನ್ನ ಗಣಪತಿಯ ದರ್ಶನ ಪಡೆದರು.

## ಲೋಕಕಲ್ಯಾಣಾರ್ಥವಾಗಿ ಹಿಂದೂ ಮಹಾಗಣಪತಿ ವಿಶೇಷ ಹೋಮ



» **ಚಳ್ಳಕೆರೆ**

ಕಳೆದ ಸುಮಾರು ಹತ್ತು ದಿನಗಳಿಂದ ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದಲ್ಲಿ ಹಿಂದೂ ಮಹಾಗಣಪತಿ ಉತ್ಸವ ಯಶಸ್ವಿಯಾಗಿ ನಡೆಯುತ್ತಿದ್ದು, ಲೋಕಕಲ್ಯಾರ್ಣಾವಾಗಿ ವಿವಿಧ ಹೋಮಗಳನ್ನು ನಡೆಸಲಾಯಿತು ಎಂದು ವಿಶ್ವಹಿಂದೂ ಪರಿಷತ್ ತಾಲ್ಲೂಕು ಅಧ್ಯಕ್ಷ ಡಾ.ಡಿ.ಎನ್.ಮಂಜುನಾಥ ತಿಳಿಸಿದರು.ಅವರು, ಈ ಬಗ್ಗೆ ಮಾಹಿತಿ ನೀಡಿ, ಪ್ರತಿವರ್ಷವೂ ಗಣೇಶನ ಉತ್ಸವದಲ್ಲಿ ಗಣಪತಿ ಹೋಮ ಸೇರಿದಂತೆ ವಿವಿಧ ಹೋಮಗಳನ್ನು ಸಾಮಾಜಿಕ ಶಾಂತಿ ನೆಲೆಸಲು ಹಾಗೂ ಲೋಕಕಲ್ಯಾಣಕ್ಕಾಗಿ ಮಾಡುತ್ತಿದ್ದು, ಈ ಬಾರಿಯೂ ಸಹ ಪೂಜೆ ಮತ್ತು ಹೋಮ ಕಾರ್ಯಕ್ರಮದಲ್ಲಿ ನೂರಾರು ಭಕ್ತರು ಪಾಲ್ಗೊಂಡಿದ್ದರು. ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ತಾಲ್ಲೂಕು ಬ್ರಾಹ್ಮಣ ಸಂಘದ ಅಧ್ಯಕ್ಷ ಡಾ.ಅನಂತರಾಮ್ ಗೌತಮ್ ಮಾಹಿತಿ ನೀಡಿ, ಗಣೇಶನ ಉತ್ಸವ ಎಂದರೆ ಇದು ಸರ್ವ ಜನಾಂಗದ ಹಬ್ಬವಾಗಿದೆ. ಗಣೇಶನನ್ನು ಪೂಜಿಸಿದರೆ ಜೀವನದಲ್ಲಿ ಯಾವುದೇ ಸಮಸ್ಯೆಗಳು ನಮಗೆ ಎದುರಾಗಲಾರವು. ಅದೇ ರೀತಿ ಉತ್ತಮ ಆರೋಗ್ಯ ಹಾಗೂ ಬದುಕಿನಲ್ಲಿ ಸುಖ, ಶಾಂತಿ ನೆಮ್ಮದಿ ಬಯಸಿ ಸಹ ನಾವು ಗಣೇಶನನ್ನು ಪೂಜಿಸುತ್ತೇವೆ. ಭಕ್ತರ ಇಷ್ಟಾರ್ಥಗಳನ್ನು ಈಡೇರಿಸುವಂತೆ ಪ್ರಾರ್ಥನೆ ಸಲ್ಲಿಸಲಾಗುತ್ತದೆ ಎಂದರು. ಈ ಸಂದರ್ಭದಲ್ಲಿ ಗೌರವಾಧ್ಯಕ್ಷ ಹಾಲಿನರೇವಣ್ಣ, ವಿಶ್ವಹಿಂದೂಪರಿಷತ್ ಅಧ್ಯಕ್ಷ ಡಾ.ಡಿ.ಎನ್. ಮಂಜುನಾಥ, ಉತ್ಸವ ಸಮಿತಿ ಅಧ್ಯಕ್ಷ ಸೂರನಹಳ್ಳಿ ವಿಜಯಕುಮಾರ್, ಶೋಭಾಯಾತ್ರೆ ಅಧ್ಯಕ್ಷ ಬಿ.ಎಸ್.ಶಿವಪುತ್ರಪ್ಪ, ಖಜಾಂಚಿ ಲಕ್ಷ್ಮಿ ಶ್ರೀವತ್ಸ, ಎಂ.ಸತ್ಯನಾರಾಯಣರಾವ್, ಬಿಜೆಪಿ ಮುಖಂಡರಾದ ಬಾಳೆಮಂಡಿರಾಮದಾಸ್, ಡಿ.ಸೋಮಶೇಖರಮಂಡಿಮಠ, ಟಿ.ಮಂಜುನಾಥ, ಮನೋಜ್‍ಹೊಸಮನೆ, ಚಿದಾನಂದ, ಮಾತೃಶ್ರೀಮಂಜುನಾಥ, ಸಿದ್ದೇಶ್, ಭಜರಂಗದಳ ಉಮೇಶ್, ಕೃಷ್ಣ, ಸೂರ್ಯ, ಮಹಂತೇಶ್, ದೊರೆನಾಗರಾಜು, ಮಧುಸೂಧನ್, ಮಾರುತಿ, ಅರ್ಚಕ ಪ್ರದೀಪ್‍ಶರ್ಮ, ಪ್ರವೀಣ್‍ಶರ್ಮ, ಯಾಪಲಪರ್ತಿ ಮುರಳೀಧರ ಪೂಜಾ ಹೋಮ ಕಾರ್ಯಗಳನ್ನು ನಡೆಸಿಕೊಟ್ಟರು.

## ಮನುಷ್ಯನಿಗೆ ವಿರಾಮಕ್ಕಿಂತ ದೇಹಕ್ಕೆ ವ್ಯಾಯಾಮ ಬೇಕು



**ಹೊಸದುರ್ಗ:** ಇಂದು ಮನುಷ್ಯ ಆರೋಗ್ಯವಾಗಿರಬೇಕು ಎಂದರೆ ಮನುಷ್ಯನಿಗೆ ವಿರಾಮಕ್ಕಿಂತ ದೇಹಕ್ಕೆ ವ್ಯಾಯಾಮ ಬೇಕು ಆರೋಗ್ಯದಿಂದ ಇರಲು ವ್ಯಾಯಾಮವೇ ಮುದ್ದು ಎಂದು ಹಾಲು ಒಕ್ಕೂಟದ ಅಧ್ಯಕ್ಷ ಎಸ್.ಶಂಕರಲಿಂಗಪ್ಪ ತಿಳಿಸಿದರು.

ತಾಲೂಕಿನ ತಾರೀಕೆರೆ ಗ್ರಾಮದಲ್ಲಿ ರೋಟರಿ ಕ್ಲಬ್ ಹೊಸದುರ್ಗ,ಮಿಲೆಟ್ಸ್ ಮತ್ತು ಹಾಲು ಒಕ್ಕೂಟ ತಾರೀಕೆರೆ ಇವರ ಸಂಯುಕ್ತಾಶ್ರಯದಲ್ಲಿ ನಾರಾಯಣ ಹೆಲ್ತ್ ಸಿಟಿ ಯವರು ಆಯೋಜಿಸಲಾಗಿದ್ದ ಉಚಿತ ಮೊಣಕಾಲುಬದಲಿ ಶಸ್ತ್ರ ಚಿಕಿತ್ಸೆ ತಪಾಸಣಾ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.ಮನುಷ್ಯ ವಯಸ್ಸಾದ ಬಳಿಕ ಪ್ರತಿಯೊಬ್ಬರಿಗೂ ಸಹಾ ಮೊಣಕಾಲು ನೋವು ಮಂಡಿನೋವು ಮತ್ತಿತರೆ ಸಹಜ ನೋವುಗಳು ಬರುವುದು ಸಹಜ ಇಂತಹ ನೋವುಗಳು ಬಂದಾಗ ವೈದ್ಯರನ್ನ ಸಂಪರ್ಕಿಸಿ ಅವರ ಸಲಹೆ ಪಡೆಯುವುದು ಅತ್ಯುತ್ತಮ ಎಂದು ಅಭಿಪ್ರಾಯಿಸಿದರು.ಅಧ್ಯಕ್ಷತೆ ವಹಿಸಿದ್ದ ರೋಟರಿ ಕ್ಲಬ್ ಅಧ್ಯಕ್ಷ ಜಯರಾಂಬಾಬು ಮಾತನಾಡಿ ಗ್ರಾಮೀಣ ಪ್ರದೇಶದ ಜನರು ಪಟ್ಟಣಕ್ಕೆ ಹೋಗಿ ತೋರಿಸಿಕೊಂಡು ಬರಲು ಅವರಿಗೆ ಕಷ್ಟವಾಗುತ್ತದೆ ಎಂಬ ಹಿನ್ನೆಲೆಯಲ್ಲಿ ಇಂತಹ ಗ್ರಾಮೀಣ ಪ್ರದೇಶಗಳಲ್ಲಿ ಇಂತಹ ಮಹತ್ವವಾದ ಶಿಬಿರಗಳನ್ನು ನಮ್ಮ ರೋಟರಿ ಹಾಗೂ ಮತ್ತಿತರೆ ಸಹಕಾರ ಸಂಘ ಸಂಸ್ಥೆಗಳ ಜೊತೆ ಜೊತೆಯಾಗಿ ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದ ಅವರು ನಮ್ಮ ರೋಟರಿ ಕ್ಲಬ್ ವತಿಯಿಂದ ರಕ್ತದಾನ ಶಿಬಿರ, ಆರೋಗ್ಯ ತಪಾಸಣಾ ಶಿಬಿರ,ನೇತ್ರ ತಪಾಸಣಾ ಶಿಬಿರ ಸೇರಿದಂತೆ ಹತ್ತು ಹಲವಾರು ಕಾರ್ಯಕ್ರಮಗಳನ್ನ ಮಾಡುತ್ತಲೆ ಇರುತ್ತೇವೆ.

**ಪ್ರಮುಖ ಸುದ್ದಿ**

# ಪತ್ರಿಕಾ ವಿತರಕರ ವೃತ್ತಿ ಸ್ವಾಭಿಮಾನಕ್ಕೆ ಪೂರಕ

» **ಮೊದಲ ಪುಟದಿಂದ**



ಎ.ಪಿ.ಜೆ.ಅಬ್ದುಲ್ ಕಲಾಂ ಅವರು ಕೂಡ ಚಿಕ್ಕ ವಯಸ್ಸಿನಲ್ಲಿ ಪತ್ರಿಕಾ ವಿತರಣೆ ವೃತ್ತಿಯಲ್ಲಿ ತೊಡಗಿ, ನಂತರ ದೇಶದ ಉನ್ನತ ಸ್ಥಾನವಾದ ರಾಷ್ಟ್ರಪತಿ ಹುದ್ದೆ ಅಲಂಕರಿಸಿದರು. ನನ್ನ ತಾತ, ತಂದೆ ಕೂಡ ಈ ವೃತ್ತಿ ಮಾಡಿದ್ದಾರೆ. ನನಗೆ ಆ ಸಮಯಯಲ್ಲಿ ಅವಕಾಶ ದೊರೆಯಲಿಲ್ಲ. ಪತ್ರಿಕೆ ಹೊರತರುವುದು ನಿತ್ಯ ಹೆರಿಗೆಯಷ್ಟೇ ನೋವು ಅನುಭವಿಸಿದಂತೆ ಎಂದು ಹೇಳಿದರು. ಪತ್ರಿಕಾ ವಿತರಕರಿಗೆ ಈಗಾಗಲೇ ನಿವೇಶನಹಂಚಿಕೆಮಾಡಲಾಗಿದ್ದು,ಹಕ್ಕುಪತ್ರ ವಿತರಣೆ ಮಾಡುವುದು ಬಾಕಿ ಇದೆ. ಇದರ ಜೊತೆಗೆ ಪತ್ರಿಕೆ ಬಂಡಲ್ ವಿಂಗಡಣೆ ಮಾಡಲು ಸ್ಥಳವನ್ನು ಗುರುತಿಸುವಂತೆ ಮನವಿ ಮಾಡಲಾಗಿದ್ದು, ಆದಷ್ಟು ಶೀಘ್ರದಲ್ಲಿ ಜಿಲ್ಲಾಡಳಿತದ ವತಿಯಿಂದ ಹಕ್ಕುಪತ್ರ ವಿತರಣೆ ಹಾಗೂ ಪತ್ರಿಕಾ ಬಂಡಲ್ ವಿಂಗಡಣೆಗೆ ಸೂಕ್ತ ಸ್ಥಳವನ್ನು ನೀಡಲು ಅಗತ್ಯ ಕ್ರಮವಹಿಸಲಾಗುವುದು ಎಂದರು.

ವಿಧಾನಪರಿಷತ್ ಸದಸ್ಯಕೆ.ಎಸ್.ನವೀನ್ ಮಾತನಾಡಿ, ಪತ್ರಿಕಾ ವಿತರಣೆ ಅತ್ಯಂತ ಶ್ರಮದ ಕಾಯಕ. ನಿಮ್ಮ ದೊಡ್ಡ ತಂಡದಿಂದಾಗಿ ಪತ್ರಿಕೆ ತಲುಪಿಸುತ್ತಿದ್ದೀರಿ. ಶಾಸಕರು, ಜಿಲ್ಲಾಧಿಕಾರಿ ಅವರೊಂದಿಗೆ ಚರ್ಚಿಸಿ ನಿವೇಶನಕ್ಕೆ ಹಕ್ಕುಪತ್ರ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತೇನೆ ಎಂದು ಭರವಸೆ ನೀಡಿದರು.

ದೀನದಯಾಳ್ ಉಪಾಧ್ಯಾಯ ಸೇರಿ ಅನೇಕರು ಪತ್ರಿಕೆಗಳನ್ನು ಹಂಚಿಕೆಯೇ ಉನ್ನತ ಸ್ಥಾನ ಪಡೆದಿದ್ದಾರೆ. ಡಿಜಿಟಲ್‍ಗಿಂತ ಪತ್ರಿಕೆ ಓದುವುದರಿಂದ ಅಚ್ಚಳಿಯದೇ ಉಳಿಯಲಿದೆ. ಪಿಎಂ-ಸ್ವಾನಿಧಿ ಯೋಜನೆ ಮೂಲಕ ಅ. 4ರಂದು ನೋಂದಣಿ ಮಾಡಿಕೊಂಡು ರೂ.10ಸಾವಿರ ಸೌಲಭ್ಯ ಪಡೆದುಕೊಳ್ಳಿ. ನಂತರ ರೂ.5 ಲಕ್ಷದಿಂದ ರೂ.10ಲಕ್ಷದವರೆಗೆ ಸಾಲ ಸೌಲಭ್ಯ ಸಿಗಲಿದ್ದು, ಜೀವನಮಟ್ಟ ಸುಧಾರಿಸಿಕೊಳ್ಳಿ ಎಂದರು.

ರಾಜ್ಯ ಪತ್ರಿಕಾ ವಿತಕರ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಶಂಭುಲಿಂಗ ಮಾತನಾಡಿ, ವಿತರಕರ ಒಗ್ಗಟ್ಟು ಒಡೆಯುವ ಕೆಲಸ ಮಾಡಬೇಡಿ. ಒಕ್ಕೂಟ ಮತ್ತು ಜಿಲ್ಲಾ ಸಂಘದ ಮೇಲೆ ವಿಶ್ವಾಸವಿಡಿ ನಿಮ್ಮ ಸಮಸ್ಯೆಗಳಿಗೆ ಖಂಡಿತ ಪರಿಹಾರ ಸಿಗಲಿದೆ. ಜಿಲ್ಲಾ ಕಾರ್ಯನಿರತ ಪತ್ರಿಕಾ ಹಂಚಿಕೆದಾರರ, ವಿತರಕರ ಜಿಲ್ಲಾ ಅಧ್ಯಕ್ಷ ಎಸ್.ತಿಪ್ಪೇಸ್ವಾಮಿ ಮಾತನಾಡಿ, ಏಳನೇ ವರ್ಷಾಚರಣೆ ಇದಾಗಿದೆ. ಕರೋನಾ ಅವಧಿಯಲ್ಲೂ ಜೀವ ಭಯದಲ್ಲೂ ಪತ್ರಿಕೆ ಉಳಿಸಿ, ಬೆಳೆಸುವ ಕೆಲಸ ಮಾಡುತ್ತಿದ್ದೇವೆ. ನಮ್ಮನ್ನು ಗುರುತಿಸುವ ಕೆಲಸ ಆಗುತ್ತಿಲ್ಲ. ನಿವೇಶನ ಕೊಡಿಸಲು ಪ್ರಾಮಾಣಿಕ ಪ್ರಯತ್ನ ಮಾಡಿದ್ದೇವೆ. ಇದಕ್ಕೆ ಪತ್ರಕರ್ತರ ಸಹಕಾರವೂ ಇದೆ. ಆದರೆ, ಹಕ್ಕುಪತ್ರ ವಿತರಿಸುವ ಕೆಲಸವಾಗಿಲ್ಲ. ವಿತರಕರಿಗಾಗಿ ಬಂಡಲ್ ವಿಂಗಡಿಸಲು ಪ್ರತ್ಯೇಕ ಸ್ಥಳ, ಭವನದ ಅಗತ್ಯವಿದ್ದು ಸ್ಪಂದಿಸಬೇಕಿದೆ ಎಂದರು.

ಹಿರಿಯ ಪತ್ರಕರ್ತ ಚಿಕ್ಕಪ್ಪನಹಳ್ಳಿ ಷಣ್ಮುಖಪ್ಪ ಮಾತನಾಡಿ, 24 ಮಂದಿ ಪತ್ರಿಕಾ ವಿತರಿಗೆ ಈಗಾಗಲೇ ನಿವೇಶನ ಹಂಚಿಕೆ ಮಾಡಲಾಗಿದ್ದು, ಹಕ್ಕು ಪತ್ರ ನೀಡುವುದು ಬಾಕಿ ಇದೆ. ಹಕ್ಕು ಪತ್ರ ವಿತರಣೆ ಕಂದಾಯ ಇಲಾಖೆ ವ್ಯಾಪ್ತಿಗೆ ಒಳಪಟ್ಟಿದ್ದು, ಒಂದು ತಿಂಗಳೊಗೆ ನಿವೇಶನಗಳಿಗೆ ಹಕ್ಕುಪತ್ರ ನೀಡಬೇಕು ಹಾಗೂ ನಗರ ವ್ಯಾಪ್ತಿಯ ಯಾವುದೇ ಸ್ಥಳದಲ್ಲಿ ಪತ್ರಿಕಾ ಬಂಡಲ್ ವಿಂಗಡಣೆಗೆ ತಾತ್ಕಾಲಿಕವಾಗಿ ಸ್ಥಳಾವಕಾಶ ಮಾಡಿಕೊಡುವಂತೆ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದರು.

ಹಿರಿಯ ಪತ್ರಕರ್ತ ಎಂ.ಎನ್. ಅಹೋಬಳಪತಿ ಮಾತನಾಡಿ, ರಾಜ್ಯದ ಯಾವ ಜಿಲ್ಲೆಯಲ್ಲೂ ಆಗದ ಹಂಚಿಕೆದಾರರು ಮತ್ತು ವಿತರಕರಿಗೆ ಮಾಜಿ ಶಾಸಕ ತಿಪ್ಪಾರೆಡ್ಡಿ ಅವರ ಸಹಕಾರದಿಂದ ನಿವೇಶನ ಸೌಲಭ್ಯ ಚಿತ್ರದುರ್ಗದಲ್ಲಿ ಮೊಟ್ಟಮೊದಲ ಬಾರಿಗೆ ಸಿಕ್ಕಿದೆ. ಆದರೆ, ಹಕ್ಕುಪತ್ರ ಕೊಡಿಸಲು ಈಗಿನ ಶಾಸಕರು, ಜಿಲ್ಲಾಧಿಕಾರಿಗಳು ಅಗತ್ಯ ಕ್ರಮವಹಿಸಬೇಕು ಎಂದು ಹೇಳದರು. ಕಾರ್ಯಕ್ರಮದಲ್ಲಿ ಜಿಲ್ಲಾ ವಾರ್ತಾಧಿಕಾರಿ ಬಿ.ವಿ.ತುಕಾರಾಂರಾವ್, ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ಬಿ.ದಿನೇಶ್ ಗೌಡಗೆರೆ, ಕೆಪಿಸಿಸಿ ಕೋ ಆರ್ಡಿನೇಟರ್ ಕುಮಾರ್ ಗೌಡ ಸೇರಿದಂತೆ ಪತ್ರಿಕಾ ವಿತರಕರು, ಹಂಚಿಕೆದಾರರು ಇದ್ದರು.

**ಫಾಸ್ಟ್ ನ್ಯೂಸ್**

## ಸೆ.30ರಂದು ಹೊಳಲ್ಕೆರೆ ಪಟ್ಟಣ ಗಣೇಶ ವಿಸರ್ಜನಾ ಶೋಭಾಯಾತ್ರೆ : ಸಂಚಾರ ಮಾರ್ಗ ಬದಲು

**ಚಿತ್ರದುರ್ಗ:** ಇದೇ ಸೆಪ್ಟೆಂಬರ್ 30ರಂದು ಹೊಳಲ್ಕೆರೆ ಪಟ್ಟಣದ ಶ್ರೀ ವಿಶ್ವ ಹಿಂದೂ ಮಹಾ ಗಣಪತಿ ಸಮಿತಿಯಿಂದ ಗಣೇಶ ವಿಸರ್ಜನಾ ಮತ್ತು ಬೃಹತ್ ಶೋಭಾಯಾತ್ರೆ ಹಮ್ಮಿಕೊಳ್ಳಲಾಗಿದೆ. ಈ ಹಿನ್ನಲೆಯಲ್ಲಿ ರಾಷ್ಟ್ರೀಯ ಹೆದ್ದಾರಿ 369ರ ವಾಹನ ಸುಗಮ ಸಂಚಾರಕ್ಕೆ ಅಡ್ಡಿಯಾಗದಂತೆ ಬೆಳಿಗ್ಗೆ 6 ಗಂಟೆಯಿಂದ ಮಧ್ಯರಾತ್ರಿ 12 ಗಂಟೆವರೆಗೆ ಸಂಚಾರ ಮಾರ್ಗ ಬದಲಾವಣೆ ಮಾಡಿ ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ ಆದೇಶ ಹೊರಡಿಸಿದ್ದಾರೆ. ಚಿತ್ರದುರ್ಗದಿಂದ ಶಿವಮೊಗ್ಗಕ್ಕೆ ತೆರಳುವ ವಾಹನಗಳು ಚಿತ್ರಹಳ್ಳಿ ಗೇಟ್‌ನಿಂದ ವಿಭಾಗವಾಗಿ ಹೊಸದುರ್ಗಕ್ಕೆ ರಸ್ತೆಯಲ್ಲಿ ಸಂಚರಿಸಿ ಹೆಚ್.ಡಿ.ಪುರ ಮಾರ್ಗವಾಗಿ ಹೋಗುವುದು. ಶಿವಮೊಗಕ್ಕೆ ಚಿಕ್ಕಜಾಜೂರು ಮಾರ್ಗವಾಗಿ ಹೊಳಲ್ಕೆರೆ ರೈಲ್ವೆ ಸ್ಟೇಷನ್ ಮುಖಾಂತರ ಹೋಗುವುದು. ಹೊಸದುರ್ಗದಿಂದ ಶಿವಮೊಗ್ಗಕ್ಕೆ ಹೋಗುವ ವಾಹನಗಳು ಅವಿನಹಟ್ಟಿ ಗ್ರಾಮದ ಮುಖಾಂತರ ಚಲಿಸಿ ಅರೇಹಳ್ಳಿ ರೈಲ್ವೇ ಸ್ಟೇಷನ್ ಮುಖಾಂತರ ಶಿವಮೊಗ್ಗಕ್ಕೆ ಹೋಗುವುದು.ಶಿವಮೊಗ್ಗದಿಂದ ಬರುವ ವಾಹನಗಳು ಅರೇಹಳ್ಳಿ ರೈಲ್ವೇ ಸ್ಟೇಷನ್‌ನಲ್ಲಿ ವಿಭಾಗವಾಗಿ ಚಿತ್ರದುರ್ಗ ಹೋಗುವ ವಾಹನಗಳು ಪೂಣಜೂರು, ಮಲ್ಲಾಪುರ, ಚಿಕ್ಕಜಾಜೂರು, ಬಿ.ದುರ್ಗ, ಭೀಮಸಮುದ್ರ ಮಾರ್ಗವಾಗಿ ಚಿತ್ರದುರ್ಗ ಹೋಗುವುದು. ಹೊಸದುರ್ಗಕ್ಕೆ ಹೋಗುವ ವಾಹನಗಳು ಮಾಳೇನಹಳ್ಳಿ, ಅವಳೇಹಟ್ಟಿ, ಹೊಳಲ್ಕೆರೆ ಮುಖಾಂತರ ಹೊಸದುರ್ಗಕ್ಕೆ ಹೋಗುವುದು.

## ಕಾವೇರಿ: ಕರ್ನಾಟಕ ಬಂದ್‌ಗೆ ಚಳ್ಳಕೆರೆಯಲ್ಲಿ ನೀರಸ ಪ್ರಕ್ರಿಯೆ



**ಚಳ್ಳಕೆರೆ:** ತಮಿಳುನಾಡಿಗೆ ಕಾವೇರಿ ನೀರು ಹರಿಸುವುದನ್ನು ವಿರೋಧಿಸಿ ಕನ್ನಡಪರ ಸಂಘಟನೆಗಳು ಕರೆ ನೀಡಿದ್ದ ಕರ್ನಾಟಕ ಬಂದ್ ಗೆ ನಗರದಲ್ಲಿ ನಿರಾಸ ಪ್ರಕ್ರಿಯೆ ವ್ಯಕ್ತವಾಗಿಯಿತು. ಮುಂಜಾನೆಯಿಂದಲ್ಲೇ ಎಂದಿನಂತೆ ಹೋಟೆಲ್, ವ್ಯಾಪಾರಿ ಮಳಿಗೆ, ಬೀದಿಬದಿ ವ್ಯಾಪಾರಿಗಳು, ಸಣ್ಣ ವ್ಯಾಪಾರಸ್ಥರು, ಸಂಚಾರ ವ್ಯವಸ್ಥೆ ಎಂದಿನಂತೆ ತಮ್ಮ ವಹಿವಾಟು ಪ್ರಾರಂಭಿಸಿದರು. ಖಾಸಗಿ ಬಸ್ ಗಳು ವಿರಳವಾಗಿ ಕಂಡುಬಂದರೂ ಮಧ್ಯಾಹ್ನದ ವೇಳೆ ಎಂದಿನಂತೆ ಕಾರ್ಯಾರಂಭ ಮಾಡಿದವು. ಬಂದ್ ನಿರೀಕ್ಷೆಯಲ್ಲಿದ್ದ ಕೆಲವೊಂದು ಬಸ್ ಮಾಲೀಕರು, ಅಂಗಡಿಯವರು ನಗರದಲ್ಲಿ ಬಂದ್ ಕಂಡುಬಾರದ ಹಿನ್ನೆಲೆಯಲ್ಲಿ ತಮ್ಮ ವ್ಯವಹಾರ ಪ್ರಾರಂಭಿಸಿಕೊಂಡರು. ಬೆಳಗ್ಗೆ ಸಾರಿಗೆ ಬಸ್ ನಿಲ್ದಾಣದಲ್ಲಿ ಬಸ್ ಗಳು ಇದ್ದರೂ ಪ್ರಯಾಣಿಕರು ಇಲ್ಲದೆ ಕೆಲವು ಬಸ್‌ಗಳ ಸಂಚಾರ ನಿಲ್ಲಿಸಲಾಯಿತು. ಮಧ್ಯಾಹ್ನದ ವೇಳೆ ಪುನರಾವರ್ತನೆಗೊಂಡ ನಂತರ ಜನರು ಬಸ್ ಗಕಳನ್ನೇರಿದರು. ಬಂದ್ ಹಿನ್ನೆಲೆ ಗ್ರಾಮೀಣ ಭಾಗದ ಜನರು ನಗರದ ಕಡೆಗೆ ಮುಖ ಮಾಡಲಿಲ್ಲ. ವಿದ್ಯಾರ್ಥಿಗಳು ಬಸ್ ಸಿಗುವ ಅನುಮಾನದಿಂದ ಸಿಕ್ಕ ಸಿಕ್ಕ ಬಸ್ ಗಳನ್ನು ಏರಿ ಚಿತ್ರದುರ್ಗ ಕಡೆಗೆ ಹೊರಟರು. ರಸ್ತೆ ಬದಿಯ ಸಣ್ಣಪುಟ್ಟ ಅಂಗಡಿಗಳು ಯಾವುದೇ ಸಂಘಟನೆ ಮುಂಚಿತವಾಗಿ ಬಂದ್ ಘೋಷಿಸದ ಕಾರಣ ಶುಕ್ರವಾರ ನಿತ್ಯದಂತೆ ಅಂಗಡಿಮುಗಟ್ಟು ಪ್ರಾರಂಭಿಸಿಕೊಂಡರು. ವಾಸ್ತವ ಪರಿಸ್ಥಿತಿಯನ್ನು ಅರಿಯಲು ತಹಶೀಲ್ದಾರ್ ರೇಹಾನ್ ಪಾಷ, ಕೆಎಸ್‌ಆರ್‌ಟಿಸಿ ಬಸ್ ಡಿಪೋ ವ್ಯವಸ್ಥಾಪಕ ಪ್ರಭು, ಎಎಸ್‌ಐ ರವಿಕುಮಾರ್ ಸೇರಿದಂತೆ ಹಲವಾರು ಅಧಿಕಾರಿಗಳು ಪರಿಶೀಲನೆ ನಡೆಸಿದರು.

ಎಂದಿನಂತೆ ನಡೆದ ಸರ್ಕಾರಿ ಕಚೇರಿ, ಶಾಲಾ-ಕಾಲೇಜು :- ತಮಿಳುನಾಡಿಗೆ ಕಾವೇರಿ ನೀರು ಹರಿಸುವ ಹಿನ್ನೆಲೆಯಲ್ಲಿ ಕರೆ ನೀಡಿದ್ದ ಬಂದಗೆ ಸ್ಥಳೀಯ ಯಾವುದೇ ಸಂಘಟನೆ ಬೀದಿಗೀಳಿಯದೆ ಜಿಲ್ಲಾ ಕೇಂದ್ರದಲ್ಲಿ ನಡೆಯುತ್ತಿದ್ದ ಪ್ರತಿಭಟನೆಯಲ್ಲಿ ಭಾಗವಹಿಸಿದ್ದು ಕೇಳಿಬಂತು. ನಗರದ ಸರ್ಕಾರಿ ಮತ್ತು ಖಾಸಗಿ ಶಾಲಾ, ಕಾಲೇಜು, ಬ್ಯಾಂಕ್, ಸರ್ಕಾರಿ ಕಚೇರಿಗಳು ಎಂದಿನಂತೆ ನಡೆದವು. ಆದರೆ, ಸಾರ್ವಜನಿಕರು ವಿರಳವಾಗಿದ್ದು ಕಂಡುಬಂತು. ಶಾಲಾ ಕಾಲೇಜಿಗೆ ವಿದ್ಯಾರ್ಥಿಗಳು ಆಗಮಿಸಲು ಯಾವುದೇ ಸಂಚಾರಿದ ತೊಂದರೆ ಕಂಡುಬರಲಿಲ್ಲ. ನಗರದಲ್ಲೂ ಆಟೋ, ಟ್ಯಾಕ್ಸಿ ಸಂಚಾರ ಎಂದಿನಂತೆ ನಡೆಯಿತು. ಜಿಲ್ಲಾಡಳಿತ ಮುನ್ನೆಚ್ಚರಿಕೆ ಕ್ರಮವಾಗಿ 144ಸೆಕ್ಷನ್ ಜಾರಿ ಮಾಡಿದ ಹಿನ್ನೆಲೆಯಲ್ಲಿ ನಗರದ ಸುತ್ತಲು ಭಾರಿ ಪೊಲೀಸ್ ಬಂದೋಬಸ್ತ್ ಏರ್ಪಡಿಸಲಾಗಿತ್ತು. ನಗರದ ನಾಲ್ಕು ರಸ್ತೆಗಳಿಗೆ ಪೊಲೀಸ್ ಸರ್ಪಗಾವಲು ನಿರ್ಮಿಸಿ ಜನರಿಗೆ ಯಾವುದೇ ಸಮಸ್ಯೆ ಉಂಟಾಗದಂತೆ ಎಚ್ಚರಿಕೆ ವಹಿಸಲಾಗಿತ್ತು. ಬೀದರ್-ಶ್ರೀರಂಗಪಟ್ಟಣ ರಾಷ್ಟ್ರೀಯ ಹೆದ್ದಾರಿ150ಎ ವಾಹನ ಸಂಚಾರ ವಿರಳವಾಗಿತ್ತು.

### ರಾಜ್ಯದ ಹಿತದೃಷ್ಟಿಯಿಂದ ಹೋರಾಟವಾಗುವುದನ್ನು ಸ್ವಾಗತಿಸುತ್ತೇವೆ

# ಸಂಕಷ್ಟ ಸೂತ್ರಕ್ಕೆ ಒತ್ತಡ ಹಾಕುವ ಅಗತ್ಯವಿದೆ

### ತಜ್ಞರ ತಂಡದ ಜತೆ ಚರ್ಚೆ ಬಳಿಕ ತೀರ್ಮಾನ: ಹೋರಾಟಗಾರರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಭಯ

» **ಬೆಂಗಳೂರು**

ತಮಿಳುನಾಡಿಗೆ ಕಾವೇರಿ ನೀರು ಬಿಡಬಾರದೆನ್ನುವುದೇ ನಮ್ಮ ಅನಿಸಿಕೆಯಾಗಿದೆ. ಇಂದು ಸಂಜೆ ತಜ್ಞರ ತಂಡದ ಜತೆಗಿನ ಸಭೆ ಬಳಿಕ ಮುಂದಿನ ತೀರ್ಮಾನ ತೆಗೆದುಕೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ರೈತ, ದಲಿತ, ಕಾರ್ಮಿಕ ಮತ್ತು ಕನ್ನಡ ಹೋರಾಟಗಾರರ ನಿಯೋಗಕ್ಕೆ ತಿಳಿಸಿದರು.



ಗೃಹ ಕಚೇರಿ ಕೃಷ್ಣಾದಲ್ಲಿ ಕಾವೇರಿ ವಿವಾದ ಕುರಿತಂತೆ ರಾಜ್ಯ ಕಬ್ಬು ಬೆಳೆಗಾರರ ರಾಜ್ಯಾಧ್ಯಕ್ಷರಾದ ಕುರುಬೂರು ಶಾಂತಕುಮಾರ್ ಹಾಗೂ ಮುಖ್ಯಮಂತ್ರಿ ಚಂದ್ರು ಅವರ ನೇತೃತ್ವದ ಹೋರಾಟಗಾರರ ನಿಯೋಗದೊಂದಿಗೆ ಇಂದು ನಡೆದ ಮಹತ್ವದ ಸಭೆಯಲ್ಲಿ ಅವರು ಪ್ರತಿಕ್ರಿಯಿಸಿದರು.

ಕಾವೇರಿ ನೀರು ಹಂಚಿಕೆಗೆ ಸಂಬಂಧಿಸಿದಂತೆ ಎರಡು ಸಮಿತಿಗಳು ಪರಿಸ್ಥಿತಿ ಅವಲೋಕನ ಮಾಡಿ ಆದೇಶ ನೀಡುತ್ತವೆ. ಬಿಳಿಗುಂಡ್ಲುವಿನಲ್ಲಿ ನೀರು ಬಿಡಬೇಕೆಂದು ಆದೇಶವಾಗಿತ್ತು. ಸಾಮಾನ್ಯ ಪರಿಸ್ಥಿತಿಯಲ್ಲಿ 177.25 ಟಿ ಎಂಸಿ ನೀರನ್ನು ಒಂದು ವರ್ಷದಲ್ಲಿ ಬಿಡಬೇಕೆಂದು ಆದೇಶವಿದೆ. ನಮ್ಮ ರಾಜ್ಯಕ್ಕೆ 284. 85 ಟಿಎಂಸಿ ನೀರು ಅಗತ್ಯವಿದೆ. ಸುಪ್ರೀಂ ಕೋರ್ಟ್ ನಲ್ಲಿ ಸಂಕಷ್ಟ ಸೂತ್ರ ಸಿದ್ಧಪಡಿಸಿಲ್ಲ. 2 ಸಮಿತಿಗಳಾಗಬೇಕೆಂದು ನ್ಯಾಯಮಂಡಳಿಯೇ ತೀರ್ಮಾನ ಮಾಡಿದೆ ಎಂದು ವಿವರಿಸಿದರು. ಪ್ರತಿ ಬಾರಿ ಸಭೆ ಕರೆದಾಗಲೂ ಪ್ರತಿಭಟಿಸುತ್ತಲೇ ಬಂದಿದ್ದೇವೆಈ ವರ್ಷ ಆಗಸ್ಟ್ ನಲ್ಲಿ ಮಳೆ ಕೈಕೊಟ್ಟಿದ್ದರಿಂದ ಸಮಸ್ಯೆ ಉಂಟಾಯಿತು. ಈ ತಿಂಗಳೂ ಕೂಡ ಮಳೆ ಅಷ್ಟೇನೂ ಆಗಿಲ್ಲ. ತಮಿಳುನಾಡಿಗೆ ಹಿಂಗಾರು ಮಳೆಯಿದೆ.

ಈವರೆಗೆ 43 ಟಿಎಂಸಿ ನೀರು ಹೋಗಿದೆ. 123 ಟಿಎಂಸಿ ನೀರು ಬಿಡಬೇಕು ಎಂದು ಆದೇಶವಾಗಿದೆ. ಆದರೆ ನಾವು ನೀರು ಬಿಟ್ಟಿಲ್ಲ. ಕಾವೇರಿ ಪ್ರಾಧಿಕಾರ ಪ್ರತಿ ಬಾರಿ ಸಭೆ ಕರೆದಾಗಲೂ ನಾವು ಪ್ರತಿಭಟಿಸುತ್ತಲೇ ಬಂದಿದ್ದೇವೆ. ನೀರಿಲ್ಲ ಎಂದೇ ಹೇಳಿದ್ದೇವೆ. ಸುಪ್ರೀಂಕೋರ್ಟ್ ಮುಂದೆಯೂ ಅರ್ಜಿ ಹಾಕಿದ್ದೆವು. ನಮಗೆ ಬೆಳೆ ಉಳಿಸಿಕೊಳ್ಳಲು 70 ಟಿಎಂಸಿ ನೀರು ನೀರಾವರಿಗೆ ಅಗತ್ಯವಿದೆ. 30 ಟಿ ಎಂಸಿ ಕುಡಿಯುವ ನೀರಿಗೆ ಅಗತ್ಯ. ಹಾಗೂ ಕೈಗಾರಿಕೆಗಳಿಗೆ 3 ಟಿಎಂಸಿ ನೀರು ಅಗತ್ಯ. ಒಟ್ಟು 106 ಟಿಎಂಸಿ ಅವಶ್ಯಕತೆ ರಾಜ್ಯಕ್ಕೆ ಇದೆ. ಆದರೆ ನಮ್ಮ ಬಳಿ ಇರುವುದು ಕೇವಲ 50 ಟಿಎಂಸಿ ನೀರು. ನಮ್ಮ ಮೊದಲ ಆದ್ಯತೆ ಕುಡಿಯುವ ನೀರು ಎಂದು ವಿವರಿಸಿದರು.

**ಇಂದು ಸಂಜೆ ಸಭೆ:** ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಮೂರ್ತಿಗಳೊಂದಿಗೆ ನೀರಾವರಿ ತಜ್ಞರು, ಮಾಜಿ ಅಡ್ವೊಕೇಟ್ ಜನರಲ್ ಗಳೊಂದಿಗೆ ಇಂದು ಸಂಜೆ ಸಭೆ ಕರೆಯಲಾಗಿದ್ದು, ಮುಂದಿನ ಕ್ರಮಗಳ ಬಗ್ಗೆ ಚರ್ಚಿಸಲಾಗುವುದು. ನೀರು ಕೊಡಬಾರದೆಂದು ನಮ್ಮ ಅನಿಸಿಕೆ. ನೀರು ಬಿಡದಿದ್ದರೆ, ಜಲಾಶಯಗಳನ್ನು ಕೇಂದ್ರ ಸರ್ಕಾರ ವಶಕ್ಕೆ ಪಡೆಯಬಹುದು, ಛಿಂಟಿಣಜಟಿಣ ಔಜಿ ಛಿಂಣಡಿಣ ಆಗುತ್ತದೆ, ಸರ್ಕಾರವನ್ನು ಡಿಸ್ಮಿಸ್ ಮಾಡಬಹುದು ಎಂದು ಪರಿಸ್ಥಿತಿಯನ್ನು ವಿವರಿಸಿದರು.

ಸಭೆಯಲ್ಲಿ ಮಾತನಾಡಿದ ಕುರುಬೂರು ಶಾಂತಕುಮಾರ್ ಅವರು ಕರ್ನಾಟಕದ ಜನರಿಗೆ ಪೆಟ್ಟು ಬೀಳುವ ಆದೇಶ ಬೀಳುತ್ತಿದೆ. ಜನ ಆತಂಕಗೊಂಡಿದ್ದಾರೆ. ರೈತರ ಪರವಾಗಿ ಸರ್ಕಾರ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಸಂಘಟನೆಗಳು ಜನಪರವಾಗಿ ಹೋರಾಟ ಮಾಡಿದಾಗ ಅವರ ಮೇಲೆ ಹಾಕಲಾಗಿರುವ ಪ್ರಕರಣಗಳನ್ನು ಹಿಂಪಡೆಯಬೇಕೆಂದು ಮನವಿ ಮಾಡಿದರು. ಮೇಕೆದಾಟು ಯೋಜನೆಗೆ ಶೀಘ್ರ ಕಾಯಕಲ್ಪ ನೀಡಬೇಕೆಂದು ಒತ್ತಾಯಿಸಿದರು.

ಮುಖ್ಯಮಂತ್ರಿ ಚಂದ್ರು ಮಾತನಾಡಿ ಸಾರ್ವಜನಿಕರು ಸ್ವಯಂಪ್ರೇರಿತವಾಗಿ ಬಂದ್ ಮಾಡಿದ್ದಾರೆ. ಪ್ರಾಧಿಕಾರದ ತೀರ್ಪು ಅವೈಜ್ಞಾನಿಕವಾಗಿದೆ. ಲೋಪ ಎಲ್ಲಿ ಆಗಿದೆ ಎಂದು ಸ್ಪಷ್ಟಪಡಿಸಬೇಕು. ನಮ್ಮ ಹಕ್ಕೊತ್ತಾಯವನ್ನು ತಮಿಳುನಾಡಿನಂತೆಯೇ ತೀವ್ರವಾಗಿ ಮಾಡಬೇಕು. ಸಂಕಷ್ಟ ಪರಿಹಾರ ಸೂತ್ರ ಇಲ್ಲದಿದ್ದರೂ ನೀರು ಬಿಡುವಂತೆ ಸೂಚಿಸುವುದು ತಪ್ಪು. ಆದೇಶ ಉಲ್ಲಂಘನೆ ಮಾಡಿದರೆ ಏನಾಗುತ್ತದೆ ಎಂದು ಪಟ್ಟಿ ಮಾಡಬೇಕು ಎಂದು ಹೇಳಿದರು. ಕುಡಿಯುವ ನೀರಿಗೆ ಆದ್ಯತೆ ನೀಡಬೇಕು. ತಮಿಳುನಾಡು ಬೆಳೆಗೆ

ನೀರು ಕೇಳುತ್ತಿದೆ. ತಕ್ಷಣ ಸದನ ಕರೆದು ಈ ಕುರಿತು ತೀರ್ಮಾನ ಕೈಗೊಳ್ಳಬೇಕೆಂದು ಒತ್ತಾಯಿಸಿದರು.

ನಿಮ್ಮ ಎಲ್ಲಾ ಬೇಡಿಕೆಗಳ ಬಗ್ಗೆ ಸಂಜೆ ತಜ್ಞರ ತಂಡದ ಜತೆಗೂ ಚರ್ಚಿಸಲಾಗುವುದು. ಬಳಿಕ ತೀರ್ಮಾನ ಮಾಡಲಾಗುವುದು ಎಂದು ಮುಖ್ಯಮಂತ್ರಿಗಳು ತಿಳಿಸಿದರು.

ನಿಯೋಗದಲ್ಲಿ ರೈತ, ದಲಿತ, ಕಾರ್ಮಿಕ ಮತ್ತು ಕನ್ನಡ ಸಂಘಟನೆಗಳ ಮುಖಂಡರು ಮತ್ತು ಪದಾಧಿಕಾರಿಗಳು ಉಪಸ್ಥಿತರಿದ್ದರು.

# ತಮಿಳುನಾಡಿಗೆ ಕಾವೇರಿ ನೀರು ಬಿಡುವ ವಿಚಾರ

### ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರೊಂದಿಗೆ ಇಂದು ಸಭೆ: ಸಿದ್ದರಾಮಯ್ಯ

» **ಬೆಂಗಳೂರು**

ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ ಆದೇಶ ವನ್ನು ಕಾವೇರಿ ನೀರು ಪ್ರಾಧಿಕಾರ ಎತ್ತಿಹಿಡಿದಿದ್ದು, ಈ ಸಂಬಂಧ ತೆಗೆದುಕೊಳ್ಳಬಹುದಾದ ಕಾನೂನು ಕ್ರಮಗಳ ಬಗ್ಗೆ ಚರ್ಚಿಸಲು ಇಂದು ಸರ್ವೋಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರೊಂದಿಗೆ ಸಭೆ ನಡೆಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.



ಅವರು ಇಂದು ವಿಧಾನಸೌಧದಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದರು.

ಕಾವೇರಿ ನದಿ ವಿಚಾರದಲ್ಲಿ ಕಾನೂನಾತ್ಮಕವಾಗಿ ರಾಜ್ಯಕ್ಕೆ ಪದೇ ಪದೇ ಹಿನ್ನಡೆಯಾಗುತ್ತಿರುವ ಬಗ್ಗೆ ಮಾಧ್ಯಮದವರ ಪ್ರಶ್ನೆಗೆ ಉತ್ತರಿಸುತ್ತಾ, ಕಾವೇರಿ ಪ್ರಾಧಿಕಾರ ಹಾಗೂ ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರಕ್ಕೆ ರಾಜ್ಯದ ವಾಸ್ತವಾಂಶದ ಬಗ್ಗೆ ವಿವರಿಸಿದರೂ , ರಾಜ್ಯಕ್ಕೆ ನ್ಯಾಯ ದೊರೆಯುತ್ತಿಲ್ಲ. ಇಂದಿನ ಸಭೆಯಲ್ಲಿ ಕಾನೂನು ತಜ್ಞರು , ಪರಿಣತರೊಂದಿಗೆ ಚರ್ಚಿಸಿ ಈ ಬಗ್ಗೆ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು ಎಂದರು.

**ಬಡವರ ಯೋಜನೆ ಬಗ್ಗೆ ಕೇಂದ್ರಕ್ಕೆ ಆಸಕ್ತಿ ಇಲ್ಲ :** ಕೇಂದ್ರಸರ್ಕಾರ ,ಸಿಂಗಾಪುರ ದೇಶಕ್ಕೆ ಅಕ್ಕಿ ರಫ್ತು ಮಾಡುತ್ತಿದ್ದು, ರಾಜ್ಯಕ್ಕೆ ಅಕ್ಕಿ ನೀಡುತ್ತಿಲ್ಲ ಎಂಬುದಕ್ಕೆ ಪ್ರತಿಕ್ರಿಯಿಸಿ, ಅಕ್ಕಿ ವಿಚಾರದಲ್ಲಿ ಕೇಂದ್ರ ಸರ್ಕಾರ ರಾಜಕೀಯ ಮಾಡುತ್ತಿದೆ. ಅಕ್ಕಿ ದಾಸ್ತಾನಿದ್ದರೂ , ಬಡವರಿಗೆ ಅಕ್ಕಿ ನೀಡಿದೆ ಅನ್ಯಾಯ ಮಾಡಿದ್ದಾರೆ. ಮೊದಲು ಅಕ್ಕಿ ಸರಬರಾಜು ಮಾಡುವುದಾಗಿ ಒಪ್ಪಿ, ನಂತರ ನಿರಾಕರಿಸಿದ್ದಾರೆ. ಬಡವರ ಯೋಜನೆ ಸಾಕಾರಗೊಳಿಸಲು ಕೇಂದ್ರಕ್ಕೆ ಆಸಕ್ತಿ ಇಲ್ಲ ಎಂದರು.

**ಪ್ರತಿಭಟನೆಗೆ ಸರ್ಕಾರದ ಆಕ್ಷೇಪವಿಲ್ಲ::** ಇಂದು ನಡೆದ ಕರ್ನಾಟಕ ಬಂದ್ ಬಗ್ಗೆ ಪ್ರತಿಕ್ರಿಯೆ ನೀಡಿ, ಪ್ರತಿಭಟನೆ ಮಾಡಲು ಸರ್ಕಾರದ ಆಕ್ಷೇಪವಿಲ್ಲ. ಆದರೆ ಸುಪ್ರೀಂ ಕೋರ್ಟ್, ಬಂದ್ ಆಚರಣೆಗೆ ಅವಕಾಶ ನೀಡಬಾರದೆಂಬ ಆದೇಶವಿದ್ದರೂ, ಬಂದ್ ಮಾಡಿದ್ದಾರೆ. ಫ್ರೀಡಂ ಪಾರ್ಕ್ ನಲ್ಲಿ ಮಾತ್ರ ಮೆರವಣಿಗೆ , ಧರಣಿ ಮಾಡಲು ಅವಕಾಶ ನೀಡಲಾಗಿದೆ ಎಂದರು.

## ದ್ವಿ-ಚಕ್ರ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು: ಸಿಪಿಐ



» **ನಾಯಕನಹಟ್ಟಿ**

ದ್ವಿ-ಚಕ್ರ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು. ಪಾದಚಾರಿಗಳು ರಸ್ತೆ ದಾಟುವಾಗ ವಾಹನ ಬರುವುದನ್ನು ಗಮನಿಸಬೇಕಾಗಿದೆ. ಸಿಗ್ನಲ್ ನೋಡಿಕೊಂಡು ಹೋಗಬೇಕು ಎಂದು ಚಳ್ಳಕೆರೆ ಸಿ.ಪಿ.ಐ. ಸಮಿವುಲ್ಲಾ ಹೇಳಿದರು. ನಾಯಕನಹಟ್ಟಿ ಸಮೀಪದ ತಳಕು ಗ್ರಾಮದ ಪೊಲೀಸ್ ಠಾಣೆಯಲ್ಲಿ ಹೆಲ್ಮೆಟ್ ಮತ್ತು ಇನ್ಸೂರೆನ್ಸ್ ಕಡ್ಡಾಯವಾಗಿ ಚಾಲನೆ ಮಾಡತಕ್ಕದ್ದು ಎಂದು ಜನಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು ಅಪ್ರಾಪ್ತರು ಚಾಲನೆ ಮಾಡಿ ಅಪಘಾತ ಮಾಡಿದರೆ 25 ಸಾವಿರ ದಂಡ, ಜೈಲುವಾಸ ಅನುಭವಿಸಬೇಕಾಗುತ್ತದೆ ಎಂದು ಎಚ್ಚರಿಸಿದರು. ರಸ್ತೆಯಲ್ಲಿ ವಾಹನ ಚಾಲನೆ ಮಾಡುವಾಗ ಮೊಬೈಲ್‌ನಲ್ಲಿ ಮಾತನಾಡಬೇಡಿ ಹಾಗೂ ನಿಮ್ಮ ಗಮನ ಬೇರೆ ಕಡೆ ಚಲಿಸುವಾಗ ಬಿಡಬೇಡಿ ಇಲ್ಲವಾದರೆ ಅಪಘಾತಕ್ಕೆ ಕಾರಣರಾಗುವಿರಿ ಎಂದರು ಸಂಚಾರ ನಿಯಮ ಪಾಲನೆ ಮಾಡುವುದರಿಂದ ಹೆಚ್ಚು ಅನುಕೂಲವಾಗುತ್ತದೆ ಎಂದು ಅವರು ಮಾತನಾಡಿದರು. ಕುಡಿದು ವಾಹನ ಚಾಲನೆ ಮಾಡಬೇಡಿ, ಪ್ರಾಣ ಕಳೆದುಕೊಳ್ಳಬೇಡಿ ಎಂದರು ಅಮೂಲ್ಯವಾದ ಜೀವ ಉಳಿಸಿಕೊಳ್ಳಿ ಪ್ರತಿ 2 ಕಿ.ಮೀ. ಅಪಘಾತಗಳು ದ್ವಿ-ಚಕ್ರ ವಾಹನಗಳಿಂದಲೇ ಆಗುತ್ತವೆ ಎಂದು ಅವರು ನುಡಿದರು. ಬೈಕ್ ಸಾವರರು ವಾಹನ ಚಾಲನೆ ಮಾಡುವಾಗ ಕಡ್ಡಾಯವಾಗಿ ಹೆಲ್ಮೆಟ್ ಹಾಕಿಕೊಳ್ಳಿ ನಿಮ್ಮನ್ನು ನಂಬಿ ಹೆಂಡತಿ ಮಕ್ಕಳು ನಂಬಿಕೆ ಹಿಟ್ಟಿರುತ್ತಾರೆ ಎಂದು ಅವರು ಬೈಕ್ ಸಾವರರಿಗೆ ತಿಳುವಳಿಕೆ ಹೇಳಿದರು.ಈ ಸಂದರ್ಭದಲ್ಲಿ ಉಪಸ್ಥಿತರಾದ ತಳಕು ಪಿ.ಎಸ್.ಐ. ಗಾದ್ರಿನಿಂಗಪ್ಪ, ಪೊಲೀಸ್ ಸಿಬ್ಬಂದಿ, ಹಾಗೂ ಸಾರ್ವಜನಿಕರು, ಆಟೋಚಾಲಕರು, ತಳಕು ವೀರೇಶ್, ಚಿಕ್ಕಮ್ಮನಹಳ್ಳಿ ತಿಪ್ಪೇಶ್ ಹಾಗೂ ಸುತ್ತಮುತ್ತಲಿನ ಹಳ್ಳಿಯ ಗ್ರಾಮಸ್ಥರು, ಯುವಕರು ಪಾಲ್ಗೊಂಡಿದ್ದರು.

## ಖೋ-ಖೋ ಸ್ಪರ್ಧೆ: ದ್ವಿತೀಯ ಸ್ಥಾನ ಪಡೆದ ಮತ್ತೋಡು ಶಾಲೆ

**ಹೊಸದುರ್ಗ:** ಚಿತ್ರದುರ್ಗದಲ್ಲಿ ನಡೆದ ಜಿಲ್ಲಾ ಮಟ್ಟದ ಬಾಲಕರ ಖೋ-ಖೋ ಸ್ಪರ್ಧೆ ವಿಭಾಗದಲ್ಲಿ ಹೊಸದುರ್ಗ ತಾಲೂಕಿನ ಕಪ್ಪಗೆರೆ ಗ್ರಾಮದ ಶ್ರೀ ಬಸವೇಶ್ವರ ಪ್ರೌಢಶಾಲಾ ವಿದ್ಯಾರ್ಥಿಗಳು ದ್ವಿತೀಯ ಸ್ಥಾನ ಪಡೆದು ವಿಭಾಗೀಯ ಮಟ್ಟಕ್ಕೆ ಆಯೆಯಾಗಿದ್ದಾರೆ ಎಂದು ದೈಹಿಕ ಶಿಕ್ಷಕರುಗಳಾದ ಅಜೇಯ್ ಮತ್ತು ಈಶ್ವರಪ್ಪ ತಿಳಿಸಿದ್ದಾರೆ.



**ಪ್ರಮುಖ ಸುದ್ದಿ**

# ಕಾವೇರಿ ನೀರು ನಿಲ್ಲಿಸಿ ನಾಡಿನ ಜನರನ್ನು ರಕ್ಷಿಸಿ

» **ಮೊಳಕಾಲ್ಮುರು**

ಬ್ರಿಟೀಷರ ಕಾಲದ ಒಪ್ಪಂದವನ್ನು ರದ್ದು ಮಾಡಿ ಹೊಸದಾಗಿ ಕಾವೇರಿ ನೀರಿನ ವಾಸ್ತವ ಸ್ಥಿತಿ ಅಧ್ಯಯನ ಮಾಡಿಸಬೇಕು ತಮಿಳು ನಾಡಿಗೆ ನೀರು ನೀಡುವ ಪ್ರಕ್ರಿಯೆ ವೈಜ್ಞಾನಿಕ ಮತ್ತು ವಾಸ್ತವಿಕ ಹಾಗೂ ವಸ್ತು ಸ್ಥಿತಿಯಲ್ಲಿ ಅಧ್ಯಯನ ನಡೆಯಬೇಕು ಎಂದು ರೈತ ಸಂಘಟನೆ ಮತ್ತು ವಿವಿಧ ಸಂಘಟನೆಗಳು ಪ್ರತಿಭಟನೆ ನಡೆಸಿ ಒತ್ತಾಯಿಸಿದರು




ಮೊಳಕಾಲ್ಮೂರು ಪಟ್ಟಣದಲ್ಲಿ ವಿವಿಧ ಸಂಘಟನೆಯಿಂದ ತಮಿಳು ನಾಡಿಗೆ ಕಾವೇರಿ ನೀರು ಹರಿಸಿರುವ ವಿರುದ್ಧ ಹಮ್ಮಿಕೊಳ್ಳಲಾಗಿದ್ದ ಪ್ರತಿಭಟನೆಯಲ್ಲಿ ಆಕ್ರೋಶ ವ್ಯಕ್ತಪಡಿಸಿದರು

ಕೆ.ಆರ್.ಎಸ್. ಡ್ಯಾಂನಲ್ಲಿ ಕುಡಿಯುವುದಕ್ಕು ನೀರು ಇಲ್ಲದೆ ಇದ್ದರು ತಮಿಳುನಾಡಿಗೆ ನೀರು ಹರಿಸಲು ಆದೇಶ ನೀಡಿರುವ ನೀರಾವರಿ ಸಲಹಾ ಸಮಿತಿ ವಿರುದ್ಧ ಕರ್ನಾಟಕ ರಾಜ್ಯ ಬಂದ್ ಬೆಂಬಲಿಸಿ ವಿವಿಧ ಸಂಘಟನೆಗಳಿಂದ ಪಟ್ಟಣದಲ್ಲಿ ರಸ್ತೆ ತಡೆ ನಡೆಸಿ ಶಿರಸ್ಥಾರ್ ಏಳುಕೋಟಿ ಅವರಿಗೆ ಮನವಿಯನ್ನು ಸಲ್ಲಿಸಿ ಅಗ್ರಹಿಸಿದರು

ಸುಮಾರು 135 ವರ್ಷಗಳ ಬ್ರಿಟೀಷ್ ಸರ್ಕಾರವಿದ್ದಾಗ ಕೇರಳ, ಪುದುಚೇಲ ಕರ್ನಾಟಕ,ತಮಿಳುನಾಡಿಗೆಕಾವೇರಿಯಿಂದ ನೀರು ಹರಿಸಲು ಒಪ್ಪಂದವಾಗಿದ್ದು ಅಂದಿನ ಬ್ರಿಟೀಷ್ ಸರ್ಕಾರದ ಅಣತಿಯಂತೆ ಮದ್ರಾಸಿನಲ್ಲಿ ರಾಜಧಾನಿ ಮಾಡಿಕೊಂಡಿದ್ದ ಬ್ರಿಟಷರು ತಮಿಳುನಾಡಿಗೆ ಹೆಚ್ಚುವರಿ ನೀರು ಹರಸಬೇಕೆಂದು ಒಪ್ಪಂದ ಮಾಡಿಸಿದ್ದರು ಹಿಂದಿನ ಒಪ್ಪಂದ ರದ್ದು ಮಾಡಿ ಹೊಸ ವಾಸ್ತು ಸ್ಥಿತಿ ವರದಿ ಆಧಾರದ ಮೇಲೆ ನೀರು ಹಂಚಿಕೆಯಾಗಬೇಕು ಎಂದು ಒತ್ತಾಯಿಸಿದರು

ಕುಡಿಯುವನೀರಿನಸಮಸ್ಯೆತೀವ್ರವಾಗಿದೆ. ರೈತರು ಬೆಳೆದ ಒಂದು ಬೆಳೆಗೂ ಸರಿಯಾಗಿ ನೀರು ಸಿಗುತ್ತಿಲ್ಲ, ಬೆಳೆಗಳು ಒಣಗಿ ರೈತರು ಆತ್ಮಹತ್ಯೆಮಾಡಿಕೊಳ್ಳುತ್ತಿದ್ದಾರೆ, ಕೇಂದ್ರ ಸರ್ಕಾರದ ಗಮನ ಹರಿಸಲು ರಾಜ್ಯದ 28 ಸಂಸತ್ ಸದಸ್ಯರು ರಾಜಿನಾಮೆ ನೀಡಿ ಕೇಂದ್ರಕ್ಕೆ ಒತ್ತಡ ಹಾಕುವ ಮೂಲಕ ರಾಜ್ಯದ ಜನರ ಮತ್ತು ರೈತರ ಹಿತ್ತಕಾಪಾಡಬೇಕು ಎಂದು ಅಗ್ರಹಿಸಿದರು

ರಾಜ್ಯ ಸಂಸದರನ್ನು . ಚಿತ್ರದುರ್ಗ ಜಿಲ್ಲೆಯ ಜನರ ಬಹುದಿನದ ಕನಸಿನ ಕೂಸಾದ ಭದ್ರಾ ಮೇಲ್ದಂಡೆ ಯೋಜನೆಯೂ ಮಂದಗತಿಯಲ್ಲಿ ಸಾಗುತ್ತಿದೆ. ಕೇಂದ್ರ ಸಚಿವರು ಹೇಳಿಕೆ ನೀಡಿ ಕೇಂದ್ರ ಸರ್ಕಾರ ರೂ.5,300/- ಕೋಟಿ ಹಣ ಮೀಸಲಿಟ್ಟದ್ದು ರಾಷ್ಟ್ರೀಯ ಯೋಜನೆ ಘೋಷಣೆ ಸಿದ್ದವಾಗಿದೆ ಆದರೆ ರಾಜ್ಯ ಸರ್ಕಾರ ಕ್ರಿಯಾಯೋಜನೆ ತಯಾರಿಸಿ ಕೇಂದ್ರಕ್ಕೆ ಕಳುಹಿಸದೇ ನಿರ್ಲಕ್ಷ್ಯ ವಹಿಸುತ್ತಿದೆಂದು ಹೇಳಿದ್ದಾರೆ, ಆದರೆ ರಾಜ್ಯ ಸರ್ಕಾರವು ಓಟಿನ ರಾಜಕಾರಣ ಮಾಡುತ್ತಿದೆ ಗ್ಯಾರಂಟಿ ಯೋಜನೆಗಳಲ್ಲಿ ಮುಳುಗಿದ್ದು ಜನರ ಕಷ್ಟಸುಖಗಳಿಗೆ ಸ್ಪಂದನೆ ಮಾಡುತ್ತಿಲ್ಲವಾದ್ದರಿಂದ ಪದೇ ಪದೇ ರಾಜ್ಯದಜಿಲ್ಲೆ,ಜನರಿಗೆಅನ್ಯಾಯವಾಗುತ್ತಿದ್ದು ರಾಜ್ಯ ಸರ್ಕಾರ ಜನರ ಒಳತಿಗೆ ತಕ್ಷಣವೆ ಕಾಂರ್ಯೋನ್ಮುಖರಾಗಬೇಕೆಂದು ಒತ್ತಾಯಿಸುತ್ತಿದರು.

ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘದ ರಾಜ್ಯ ಉಪಾಧ್ಯಕ್ಷಬೇಡರೆಡ್ಡಿ ಬಸವ ರೆಡ್ಡಿ

ಭಾರತ ಕಮ್ಯುನಿಸ್ಟ್ ಪಕ್ಷದ ತಾ.ಕಾರ್ಯದರ್ಶಿ ಜಾಫರ್ ಷರೀಫ್. ಮರಲಹಳ್ಳಿ ರವಿಕುಮಾರ್ ಮಂಜುನಾಥ್ ಜಿಂಕಾ ಶ್ರೀನಿವಾಸ್ ಶಿವಮೂರ್ತಿ ತಮ್ಮಣ್ಣ ವೆಂಕಟೇಶ್ ರಾಜಣ್ಣ ಬಸವರಾಜ್ ಮುಂತಾದವರಿದರು ಉಪಸ್ಥಿತರಿದ್ದರು

ಫಾಸ್ಟ್ ನ್ಯೂಸ್

## ಆಹಾರ ಧಾನ್ಯ ಹಂಚಿಕೆ: ಇಕೆವೈಸಿ ಕಡ್ಡಾಯ

» ದಾವಣಗೆರೆ

ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆಯಡಿ ಜಿಲ್ಲೆಯಲ್ಲಿನ ಪಡಿತರ ಚೀಟಿದಾರರಿಗೆ ಸೆಪ್ಟೆಂಬರ್ ಮಾಹೆಗೆ ಅನ್ವಯವಾಗುವಂತೆ ಪಡಿತರ ಧಾನ್ಯವನ್ನು ಹಂಚಿಕೆ ಮಾಡಲಾಗಿದೆ.ಅಂತ್ಯೋದಯ ಪಡಿತರ ಚೀಟಿದಾರರಿಗೆ 21 ಕೆ.ಜಿ ಅಕ್ಕಿ ಮತ್ತು ರಾಗಿ 14 ಕೆ.ಜಿ ಪ್ರತಿ ಕಾರ್ಡ್‌ಗೆ, ಆದ್ಯತಾ ಹಾಗೂ ಬಿ.ಪಿ.ಎಲ್ ಪಡಿತರ ಚೀಟಿದಾರರಿಗೆ 3 ಕೆ.ಜಿ ಅಕ್ಕಿ ಮತ್ತು ಪ್ರತಿ ಸದಸ್ಯರಿಗೆ 2 ಕೆ.ಜಿ ರಾಗಿ ಉಚಿತವಾಗಿ ವಿತರಿಸಲಾಗುತ್ತದೆ. ಹಾಗೂ ಪ್ರತಿ ಕೆ.ಜಿ ಗೆ ರೂ.15 ರಂತೆ ಒಪ್ಪಿಗೆ ನೀಡಿದ ಎ.ಪಿ.ಎಲ್ ಏಕ ಸದಸ್ಯ ಪಡಿತರ ಚೀಟಿದಾರರಿಗೆ 5 ಕೆ.ಜಿ, ಎರಡು ಮತ್ತು ಹೆಚ್ಚಿನ ಸದಸ್ಯರನ್ನು ಹೊಂದಿರುವವರಿಗೆ 10 ಕೆ.ಜಿ ಅಕ್ಕಿಯನ್ನು ವಿತರಿಸಲಾಗುವುದು.ಈವರೆಗೂ ಇ–ಕೆವೈಸಿ ಮಾಡಿಸಿಕೊಳ್ಳದೇ ಇರುವ ರಾಜ್ಯದ ಯಾವುದೇ ಪಡಿತರ ಚೀಟಿದಾರರು ತಮ್ಮ ಹತ್ತಿರದ ನ್ಯಾಯಬೆಲೆ ಅಂಗಡಿಯಲ್ಲಿ ಇಕೆವೈಸಿ ಕಡ್ಡಾಯವಾಗಿ ಪೂರ್ಣಗೊಳಿಸಿಕೊಳ್ಳಬೇಕು.ಪಡಿತರ ಚೀಟಿದಾರರ ಖಾತೆಗೆ ನೇರವಾಗಿ ಹಣ ವರ್ಗಾವಣೆಗೆ ಸಂಬಂಧಿಸಿದಂತೆ, ತಮ್ಮ ಬ್ಯಾಂಕ್ ಖಾತೆಯನ್ನು ಆಧಾರ್ ಕಾರ್ಡ್‌ನೊಂದಿಗೆ ಬ್ಯಾಂಕಿನಲ್ಲಿ ಇಕೆವೈಸಿ ಮತ್ತು ಎನ್.ಪಿ.ಸಿ.ಐ ಮ್ಯಾಪಿಂಗ್ ಮಾಡಿಸಿಕೊಳ್ಳಬೇಕು,ಹಾಗೆಯೇ ಖಾತೆಹೊಂದಿರದ ಕಾರ್ಡುದಾರರು ರಾಷ್ಟ್ರೀಕೃತ ಬ್ಯಾಕ್‌ನಲ್ಲಿ ಹೊಸ ಖಾತೆ ಅಥವಾ ಅಂಚೆ ಇಲಾಖೆಯಲ್ಲಿ ಇಂಡಿಯನ್ ಪೋಸ್ಟಲ್ ಪೇಮೆಂಟ್ ಬ್ಯಾಂಕ್ ಖಾತೆಯನ್ನು ಮಾಡಿಸಿಕೊಳ್ಳಬೇಕು.ಎಸ್.ಸಿ ಮತ್ತು ಎಸ್.ಟಿ ಕಾರ್ಡುದಾರರು ಕುಟುಂಬದ ಮಾಹಿತಿಯನ್ನು ನವೀಕರಿಸಲು ಪಡಿತರ ಚೀಟಿ ಮತ್ತು ಎ.ಜೆ.ಎಸ್.ಕೆ ವತಿಯಿಂದ ನೀಡಲಾದ ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯನ್ನು ನ್ಯಾಯಬೆಲೆ ಅಂಗಡಿಯಲ್ಲಿ ನೀಡಲು ಹೊನ್ನಾಳಿ ತಹಶೀಲ್ದಾರ್ ಪುಟ್ಟರಾಜ ಗೌಡ ತಿಳಿಸಿದ್ದಾರೆ.

## 3 ನೇ ಸುತ್ತಿನ ಮಿಷನ್ ಇಂದ್ರಧನುಷ್ 5.0 ಸಭೆ

» ದಾವಣಗೆರೆ

ಜಿಲ್ಲೆಯಾದ್ಯಂತ ಅಕ್ಟೋಬರ್ 9 ರಿಂದ 14 ರವರೆಗೆ ನಡೆಯುವ 3 ನೇ ಸುತ್ತಿನ ಆಖಿಈ (ಊಜಿಣಡಿಟಿಜಿಣ ಣಭೆಇ ಜಿಂಡಿಟಿಜ) ಮಿಷನ್ ಇಂದ್ರಧನುಷ್ 5.0(ಖಒಖ ) ಸಮನ್ವಯ ಸಮಿತಿ ಸಭೆಯನ್ನು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಅ.3 ರಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಗಣದಲ್ಲಿ ಏರ್ಪಡಿಸಲಾಗಿದೆ.

## ಹೊಸದುರ್ಗದಲ್ಲಿ ಇಂದು ವಿರಾಟ್ ಗಣಪತಿಯ ಶೋಭ ಯಾತ್ರೆ ಹಾಗೂ ವಿಸರ್ಜನೆ ಕಾರ್ಯಕ್ರಮ



ಹೊಸದುರ್ಗ:ಪಟ್ಟಣದ ಹಳೆ ಪ್ರವಾಸಿ ಮಂದಿರದ ಬಳಿ ಆಯೋಧ್ಯ ಮಂಟಪದಲ್ಲಿ ಪ್ರತಿಷ್ಠಾಪಿಸಾಗಿರುವ 10 ನೇ ವರ್ಷದ ವಿರಾಟ್ ಹಿಂದೂ ಮಹಾ ಸಾಗರ ಗಣಪತಿಯ ಶೋಭಯಾತ್ರೆ ಹಾಗೂ ವಿಸರ್ಜನಾ ಕಾರ್ಯಕ್ರಮ ಸೆ.30 ರಂದು ಶನಿವಾರ ಜರುಗಲಿದ್ದು ಇದರ ಅಂಗವಾಗಿ ಸೆ.29 ರಂದು ಶುಕ್ರವಾರ ಅನ್ನಸಂತರ್ಪಣೆ ಕಾರ್ಯಕ್ರಮ ನಡೆಯಿತು. ಈ ಒಂದು ಪ್ರಸಾದ ಅನ್ನಸಂತರ್ಪಣೆಯಲ್ಲಿ ಸಾವಿರಾರು ಭಕ್ತರು ಆಗಮಿಸಿ ಪ್ರಾಸದ ಸ್ವೀಕರಿಸಿದರು.ಇದೇ ದಿನ ಮುಂಜಾನೆ ಹೋಮ ಹಾಗು ವಿಶೇಷ ಪ್ರಜಾ ಕಾರ್ಯಗಳು ಜರುಗಿದವು.

## ಸೆ.30ರಂದು ನಿರಾಶ್ರಿತರಿಗೆ ಕಾನೂನು ಅರಿವು ನೆರವು

ಚಿತ್ರದುರ್ಗ: ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ವಕೀಲರ ಸಂಘ, ಸಮಾಜ ಕಲ್ಯಾಣ ಇಲಾಖೆ ಹಾಗೂ ಗೋನೂರು ನಿರಾಶ್ರಿತರ ಪರಿಹಾರ ಕೇಂದ್ರ ಇವರುಗಳ ಸಂಯುಕ್ತಾಶ್ರಯದಲ್ಲಿ ನಿರಾಶ್ರಿತರಿಗೆ ಕಾನೂನು ಅರಿವು ನೆರವು ಕಾರ್ಯಕ್ರಮ ಹಾಗೂ ಮಾನಸಿಕ ಆರೋಗ್ಯ ತಪಾಸಣಾ ಶಿಬಿರವನ್ನು ಇದೇ ಸೆಪ್ಟೆಂಬರ್ 30ರಂದು ಬೆಳಿಗ್ಗೆ 11.30ಕ್ಕೆ ಚಿತ್ರದುರ್ಗ ತಾಲ್ಲೂಕಿನ ಗೋನೂರು ನಿರಾಶ್ರಿತರ ಪರಿಹಾರ ಕೇಂದ್ರದಲ್ಲಿ ಹಮ್ಮಿಕೊಳ್ಳಲಾಗಿದೆ. ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಉದ್ಘಾಟನೆ ನೆರವೇರಿಸುವರು. ಸಮಾಜ ಕಲ್ಯಾಣ ಇಲಾಖೆ ಉಪನಿರ್ದೇಕ ಜಗದೀಶ್ ಹೆಬ್ಬಳ್ಳಿ ಅಧ್ಯಕ್ಷತೆ ವಹಿಸುವರು.

# ಕರ್ನಾಟಕ ಬಂದ್ ಹೊಸದುರ್ಗದಲ್ಲಿ ವಿಫಲ

» ಹೊಸದುರ್ಗ

ತಮಿಳುನಾಡಿಗೆ ಕಾವೇರಿ ನೀರು ಹರಿಸುವುದನ್ನು ವಿರೋಧಿಸಿ ಶುಕ್ರವಾರ ಕರ್ನಾಟಕ ಬಂದ್‌ಗೆ ಕರೆ ನೀಡಲಾಗಿದ್ದ ಹಿನ್ನೆಲೆಯಲ್ಲಿ ಹೊಸದುರ್ಗ ಪಟ್ಟಣ ಮತ್ತು ತಾಲೂಕಿನಾದ್ಯಂತ ಕರ್ನಾಟಕ ಬಂದ್ ವಿಫಲವಾಗಿರುವ ದೃಶ್ಯ ತಾಲೂಕಿನಾದ್ಯಂತ ಕಂಡು ಬಂದಿತು.

ತಾಲೂಕಿನ ರೈತ ಸಂಘ ಮತ್ತು ರೈತ ಮುಖಂಡರುಗಳು ಶುಕ್ರವಾರ ಕರ್ನಾಟಕ ಬಂದ್ ಬೆಂಬಲಿಸುವ ಸಲುವಾಗಿ ಗುರುವಾರವೇ ಪತ್ರಿಕಾ ಹೇಳಿಕೆ ಹಾಗು ಮತ್ತಿತರೆ ಪ್ರಚಾರಗಳನ್ನು ಕೈಗೊಂಡು ಹೊಸದುರ್ಗ ಪಟ್ಟಣ ಸೇರಿದಂತೆ ಇಡೀ ತಾಲೂಕಿನಾದ್ಯಂತ ಬಂದ್ ಮಾಡಬೇಕು ಎಂದು ಕರೆ ನೀಡಿದ್ದರು ಆದರೆ ಶುಕ್ರವಾರ ಮುಂಜಾನೆಯಿಂದ ಸಂಜೆಯವರೆಗೂ ಸಹಾ ಬಂದ್ ವಿಫಲವಾಯಿತು. ಬೆರಳೆಣಿಕೆಯಷ್ಟು ಮಾತ್ರ ಅಂಗಡಿ ಮುಗ್ಗಟ್ಟುಗಳು ಮಾತ್ರ ಬಾಗಿಲಿ ಹಾಕಿದ್ದವು.ಬಂದ್‌ಗೆ ಹೊಸದುರ್ಗ ಪಟ್ಟಣದ ಸೇರಿದಂತೆ ತಾಲೂಕಿನಾಧ್ಯಂತ ವಿಫಲ ಪ್ರತಿಕ್ರಿಯೆ ವ್ಯಕ್ತವಾಯಿತು.



ಹೊಸದುರ್ಗ ಪಟ್ಟಣದಲ್ಲಿ ಶುಕ್ರವಾರ ಎಂದಿನಂತೆ ಓಡಾಡುತ್ತಿರುವ ವಾಹನಗಳು ಹಾಗೂ ಸಾರ್ವಜನಿಕರು.

ತಾಲೂಕಿನ ಜನರಿಗೆ ಬಂದ್ ಬಿಸಿ ತಟ್ಟಲಿಲ್ಲ. ಪಟ್ಟಣದಲ್ಲಿ ಬಸ್ ಸಂಚಾರ ವಿರಳವಾಗಿದ್ದು ಬಿಟ್ಟರೆ ಲಘು ವಾಹನಗಳ ಓಡಾಟ, ಬೈಕ್‌ಗಳ ಓಡಾಟ ವ್ಯಾಪಾರ ವಹಿವಾಟು ಜನ ಜೀವನ ಎಂದಿನಂತೆ ನಡೆದವು, ಬ್ಯಾಂಕು, ಸರ್ಕಾರಿ ಕಛೇರಿಗಳು, ಶಾಲಾ ಕಾಲೇಜುಗಳು ತೆರೆದಿದ್ದವು.

ಮದ್ಯಾಹ್ನ 2 ಗಂಟೆಯ ಸುಮಾರಿಗೆ ರೈತ ಸಂಘದ ಮುಖಂಡರುಗಳು ಪಟ್ಟಣದ ಮುಖ್ಯ ರಸ್ತೆಗಳಲ್ಲಿ ಪ್ರತಿಭಟನಾ ಮೆರವಣಿಗೆ ನಡೆಸಿ ಸರ್ಕಾರದ ವಿರುದ್ದ ಘೋಷಣೆ ಕೂಗಿದರು.

ಪ್ರತಿಭಟನೆಯ ನೇತೃತ್ವ ವಹಿಸಿದ್ದ ತಾಲೂಕು ರೈತ ಸಂಘಧ ಅಧ್ಯಕ್ಷ ಬೋರೇಶ್ ಮಾತನಾಡಿ ಕಾವೇರಿ ನದಿ ನೀರನ್ನು ತಮಿಳುನಾಡಿಗೆ ಬಿಡುವ ಮುಖಾಂತರ ಕರ್ನಟಕ ರಾಜ್ಯದ ಗಂಭೀರ ಬರಗಾಲದ ಪರುಸ್ಥಿತಿಯಲ್ಲಿ ರಾಜ್ಯದ ರೈತರಿಗೆ ಮತ್ತು ನಗರಬ–ಪಟ್ಟಣಗಳಲ್ಲಿ ಕುಡಿಯಲು ಮತ್ತು ದಿನಬಳಕೆಗೆ ಕಾವೇರಿ ನೀರಿನ ಅವಲಂಭಿತರಿಗೆ ಕರ್ನಾಟಕ ರಾಜ್ಯ ಸರ್ಕಾರ ದ್ರೋಹ ಬಗೆದಿದೆ ಎಂದು ಸರ್ಕಾರದ ವಿರುದ್ಧ ಕಟುವಾದ ಟೀಕೆ ಮಾಡಿದರು.

ಗೌರವಾಧ್ಯಕ್ಷ ಕೆ.ಸಿ.ಮಹೇಶ್ವರಪ್ಪ,ರೈತ ಮುಖಂಡ ತಾರೀಕೆರೆಕರಿಸಿದ್ದಯ್ಯ ಮಾತನಾಡಿದರು.

ಈ ಸಂಧರ್ಬದಲ್ಲಿ ಶಶಿಧರ ಹೆಚ್.ಆರ್. ಗಂಗಾಧರ್. ಹರೀಶ್, ಸಿದ್ದಪ್ಪ, ಪುಟ್ಟಪ್ಪ, ಸತೀಶ್,ಚಿತ್ತಪ್ಪ, ಕೃಷ್ಣಪ್ಪ ಸೇರಿದಂತೆ ರೈತ ಸಂಘದವರು ಭಾಗಿಯಾಗಿದ್ದರು. ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ನಡೆಸಿ ನಂತರ ತಾಲೂಕು ಕಛೇರಿಗೆ ತೆರಳಿ ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಿದರು. ಸಿಪಿಐ ತಿಮ್ಮಣ್ಣ ಅವರ ನೇತೃತ್ವದಲ್ಲಿ ಪೋಲೀಸ್ ಬಿಗಿ ಬಂದೂ ಬಸ್ತ್ ಆಯೋಜಿಸಲಾಗಿತ್ತು. ಬಂದ್ ವೇಳೆ ತಾಲೂಕಿನಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆದಿರುವ ಬಗ್ಗೆ ವರದಿಯಾಗಿಲ್ಲ,

# ಸ್ವಾರ್ಥವಿಲ್ಲದೆ ಸಮಾಜಕ್ಕೆ ಸಮರ್ಪಿತವಾದ ಬದುಕು ಸರ್ವ ಕಾಲಕ್ಕೂ ಸಾರ್ಥಕ, ಶ್ರೇಷ್ಠತೆ ಪಡೆಯುತ್ತದೆ

» ಹೊಸದುರ್ಗ

ಸಮಾಜಕ್ಕಾಗಿ ಶ್ರಮಿಸಿದವರು ಇತಿಹಾಸದ ಪುಟಗಳಲ್ಲಿ ಸ್ಥಾನ ಪಡೆದಿದ್ದಾರೆ. ಅತಂಹ ಮಹಾತ್ಮರನ್ನು ನಾವು ಅನುಸರಿಸಬೇಕಿದೆ. ಯುವಕರು ಅವರ ಅದರ್ಶಗಳನ್ನು ಬದುಕಿನಲ್ಲಿ ಆಳವಡಿಸಿಕೊಂಡರೆ ಹೆಚ್ಚಿನ ಸಾಧನೆಗೆ ಅವಕಾಶ ದೊರೆಯುತ್ತದೆ. ಭಾವಸಾರ ಕ್ಷತ್ರಿಯ ಸಮಾಜ ಹಿಂದುಳಿದ ಸಮಾಜವಾದರೂ ಅತ್ಯಂತ ಶ್ರೀಮಂತ ಸಂಸ್ಕೃತಿಯನ್ನು ಹೊಂದಿದೆ ಎಂದು ವಿಶ್ರಾಂತ ಹೈಕೋರ್ಟ ನ್ಯಾಯಾಧೀಶ ಹೆಚ್.ಬಿಲ್ಲಪ್ಪ ತಿಳಿಸಿದರು.

ಪಟ್ಟಣದ ವಿಠಲ ರುಕುಮಾಯಿ ದೇವಾಲಯದಲ್ಲಿ ಗುರುವಾರ ಭಾವಸಾರ ಕ್ಷತ್ರಿಯ ಸಮಾಜ ಮಹಾದೇವ್ ರಾವ್ ಗೋವಿಂದ ರಾವ್ ತೇಲ್ಕರ್ ಅವರ 169 ನೇ ಜನ್ಮದಿನೋತ್ಸವದ ಅಂಗವಾಗಿ ಆಯೋಜಿಸಿದ್ದ ನುಡಿ–ನಮನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ಸ್ವಾರ್ಥವಿಲ್ಲದೆ ಸಮಾಜಕ್ಕೆ ಸಮರ್ಪಿತವಾದ ಬದುಕು ಸರ್ವ ಕಾಲಕ್ಕೂ ಸಾರ್ಥಕ ಹಾಗೂ ಶ್ರೇಷ್ಠತೆಯನ್ನು ಪಡೆಯುತ್ತದೆ ಎಂದು ಅತ್ಯಂತ ಹಿಂದುಳಿದ ಹಾಗೂ ಸಣ್ಣ ಸಮುಧಾಯವಾದ ಭಾವಸಾರ ಸಮಾಜವನ್ನು ಸಂಘಟಿಸುವ ಮೊದಲ ಪ್ರಯತ್ನ ಮಾಡಿದ ಮಹಾದೇವ್ ರಾವ್ ಗೋವಿಂದ ರಾವ್ ತೇಲ್ಕರ್ ಅವರು 1911 ರಲ್ಲಿ ರಾಷ್ಟ್ರೀಯ ಮಟ್ಟದಲ್ಲಿ ಅಖಿಲ ಭಾರತೀಯ ಭಾವಸಾರ ಮಹಾಸಭಾವನ್ನು ಸ್ಥಾಪಿಸಿದರು.



1913 ರವರಗೆ ಅದರ ಅಧ್ಯಕ್ಷರಾಗಿ ಭಾವಸಾರ ಸಮಾಜದ ಅಭಿವೃದ್ಧಿಗೆ ತಮ್ಮ ಬದುಕನ್ನು ಸಂಪೂರ್ಣವಾಗಿ ಸಮರ್ಪಿಸಿದರು. ಅವರು 1854 ರ ಸೆಪ್ಟಂಬರ್ 27 ರಂದು ಅವಿಭಜಿತ ಚಿತ್ರದುರ್ಗ ಜಿಲ್ಲೆಯ ಹರಿಹರದಲ್ಲಿ ಜನಿಸಿದರು ಎನ್ನುವುದು ನಮ್ಮೆಲ್ಲರಿಗೂ ಹೆಮ್ಮೆಯ ಸಂಗತಿ ಎಂದರು.

ಎಬಿಬಿಕೆ ಮಹಾಸಭಾದ ರಾಷ್ಟ್ರೀಯ ಉಪಾಧ್ಯಕ್ಷ ಉಮೇಶ ಗುಜ್ಜಾರ್ ಮಾತನಾಡಿ ಭಾವಸಾರ ಸಮುದಾಯದ ಅಭಿವೃದ್ಧಿಗೆ ಒಂದು ಗುರುಪೀಠ ಸ್ಥಾಪನೆಯ ಅಗತ್ಯವಿದೆ. ಸಮುದಾಯಕ್ಕೆ ಗುರುಗಳು ದೊರೆತರೆ ಸಂಘಟನೆಗೆ ಅನುಕೂಲವಾಗುತ್ತದೆ. ಕುಲದೇವತೆ ಹಿಂಗುಲಾಜ ಮಾತ ಶಕ್ತಿಪೀಠವು ಪಾಕಿಸ್ಥಾನದಲ್ಲಿರುವುದರಿಂದ ದರ್ಶನ ಪಡೆಯಲು ಸಾಧ್ಯವಾಗುತ್ತಿಲ್ಲ. ಕರ್ನಾಟಕದಲ್ಲಿಯೇ ಹಿಂಗುಲಾಜ ಮಾತ ಶಕ್ತಿ ಪೀಠವನ್ನು ಸ್ಥಾಪಿಸಿದರೆ ಸಮುಧಾಯದ ಜನರ ಧಾರ್ಮಿಕ ಅಚರಣೆಗಳಿಗೆ ಅನುಕೂಲವಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ವಕೀಲ ಗಂಗಾಧರ್, ಸಮಾಜದ ಮುಖಂಡರಾದ ಮೋಹನ್ ಗುಜ್ಜಾರ್, ಸಂಜು ಹೋವಳೆ, ಸೇರಿದಂತೆ ಸಮಾಜದ ಮುಖಡರುಗಳು ಸಮಾಜದ ಬಂಧುಗಳು ಉಪಸ್ಥಿತರಿದ್ದರು.

## ಜಿ.ಪಂ ಆವರಣದಲ್ಲಿ ಶ್ರಮದಾನ





» ಚಿತ್ರದುರ್ಗ

ಚಿತ್ರದುರ್ಗ ನಗರದ ಜಿಲ್ಲಾ ಪಂಚಾಯತ್ ಆವರಣದಲ್ಲಿ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಗುರುವಾರ ಸ್ವಚ್ಛತಾ ಹೀ ಸೇವಾ ಕಾರ್ಯಕ್ರಮ ಪ್ರಯುಕ್ತ ಶ್ರಮದಾನ ಕಾರ್ಯಕ್ರಮ, ಪ್ರತಿಜ್ಞಾ ವಿಧಿ ಮತ್ತು ಸಾರ್ವಜನಿಕರಿಗೆ ಏಕಬಳಕೆ ಪ್ಲಾಸ್ಟಿಕ್ ಕುರಿತು ಅರಿವು ಮೂಡಿಸಲಾಯಿತು. ಈ ಸಂದರ್ಭದಲ್ಲಿ ಮುಖ್ಯ ಯೋಜನಾ ಅಧಿಕಾರಿಗಳು, ಉಪ ಕಾರ್ಯದರ್ಶಿಗಳು, ಮುಖ್ಯ ಲೆಕ್ಕಾಧಿಕಾರಿಗಳು, ಸಹಾಯಕ ಯೋಜನಾಧಿಕಾರಿ, ಜಿಲ್ಲಾ ಮಟ್ಟದ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಸಿಬ್ಬಂದಿ, ಸ್ವಚ್ಛ ಭಾರತ್ ಮಿಷನ್ (ಗ್ರಾ) ಜಿಲ್ಲಾ ಸಮಾಲೋಚಕರು, ನರೇಗಾ ಸಮಾಲೋಚಕರು, ಎನ್‌ಆರ್‌ಎಲ್‌ಎಂ ಸಮಾಲೋಚಕರು ಉಪಸ್ಥಿತರಿದ್ದರು.

# ನ್ಯಾಯ, ಸ್ವಾತಂತ್ರ್ಯಕ್ಕಾಗಿ ಭಾರತದ ಅವಿರತ ಹೋರಾಟದ ಪ್ರತೀಕವಾಗಿರುವ ಭಗತ್ ಸಿಂಗ್

» ಹೊಸದುರ್ಗ

ಭಗತ್ ಸಿಂಗ್ ತಮ್ಮ ದೇಶಪ್ರೇಮದಿಂದ ಪರಕೀಯ ಆಡಳಿತವನ್ನು ಮಂಡಿಯೂರಿಸಲು ಶ್ರಮಿಸಿದರೆ, ಮತ್ತೊಂದೆಡೆ ತಮ್ಮ ವಿಚಾರಗಳಿಂದ ವಿಭಾಜಿತ ಭಾರತವನ್ನು ಸ್ವಾತಂತ್ರ್ಯ ಹೋರಾಟದಲ್ಲಿ ಒಗ್ಗೂಡಿಸಲು ಶ್ರಮಿಸಿದರು. ಭಗತ್ ಸಿಂಗರ ದೇಶಭಕ್ತಿ ಮತ್ತು ಅವರ ಚಿಂತನೆಗಳು ದೇಶಪ್ರೇಮಿಗಳಲ್ಲಿ ದೇಶ ಸೇವೆ ಎಂಬ ಕಿಡಿಯನ್ನು ಹತ್ತಿಸುತ್ತಿವೆ. ಅಲ್ಲದೇ ಯುವ ಮನಸ್ಸುಗಳನ್ನು ಆವರಿಸುತ್ತಿದೆ ನ್ಯಾಯ ಮತ್ತು ಸ್ವಾತಂತ್ರ್ಯಕ್ಕಾಗಿ ಭಾರತದ ಅವಿರತ ಹೋರಾಟದ ಪ್ರತೀಕ ಭಗತ್ ಸಿಂಗ್ ಎಂದು ಸದ್ಗುರು ಆಯುರ್ವೇದ ಉತ್ಪನ್ನಗಳ ಮಾಲೀಕ ಸದ್ಗುರುಪ್ರದೀಪ್ ಡಿ.ಎಸ್. ಹೇಳಿದರು.




ಪಟ್ಟಣದ ಅಯೋಧ್ಯ ಮಂಟಪದಲ್ಲಿ ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ವೇದಿಕೆಯಲ್ಲಿ ಆಯೋಜಿಸಿದ್ದ ಭಗತ್ ಸಿಂಗರ ಜಯಂತಿ ಮತ್ತು ರಕ್ತದಾನ ಶಿಬಿರ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಭಾಗವಹಿಸಿ ಅವರು ಮಾತನಾಡಿದರು.

ಭಗತ್ ಸಿಂಗ್ ರ 116 ನೇ ಜನ್ಮದಿನವನ್ನು ನಾವು ನೀವೆಲ್ಲರೂ ಆಚರಣೆ ಮಾಡುತ್ತಿದ್ದೇವೆ. ಅವರ ಜನ್ಮ ದಿನಾಚರಣೆ ಒಂದು ದಿನಕ್ಕೆ ಸೀಮಿತವಾಗದೆ, ಅವರ ವಿಚಾರಧಾರೆಗಳು ಮತ್ತು ಚಿಂತನೆಗಳು ಯುವ ಮನಸ್ಸುಗಳನ್ನು ತಲುಪುವಂತೆ ಮಾಡಬೇಕೆಂದು ತಿಳಿಸಿದರು.

ಈ ಸಂಧರ್ಬದಲ್ಲಿ ಯುವ ಉದ್ಯಮಿ ದಿಲೀಪ್ ಗುರುಸ್ವಾಮಿ, ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ಅಧ್ಯಕ್ಷ ಪ್ರದೀಪ್ ಮತ್ತು ಮುಖಂಡ ನವೀನ್, ಯುವ ಮುಖಂಡ ತುಂಬಿನಕೆರೆ ಬಸವರಾಜ್, ಅಖಿಲ ಭಾರತೀಯ ವಿದ್ಯಾರ್ಥಿ ಪರಿಷತ್ ತಾಲೂಕು ಸಂಚಾಲಕ ಭಾನುಪ್ರಕಾಶ್ ಸೇರಿದಂತೆ ವೈದ್ಯರು, ಆರೋಗ್ಯ ಇಲಾಖೆ ಸಿಬ್ಬಂದಿಗಳು ಮತ್ತು ವಿರಾಟ್ ಹಿಂದೂ ಮಹಾಸಾಗರ ಗಣಪತಿ ಸೇವಾ ಟ್ರಸ್ಟ್ ಸದಸ್ಯರಿದ್ದರು.

ಪ್ರಮುಖ ಸುದ್ದಿ

# ಅ.3ರಂದು ಪ್ರಧಾನ ಮಂತ್ರಿ ಸ್ವನಿಧಿ ಯೋಜನೆಗೆ ಚಾಲನೆ

» ಹೊಸದುರ್ಗ

ಪ್ರಧಾನಿ ನರೇಂದ್ರ ಮೋದಿಜಿ ಯವರ ಮಹತ್ವಾಕಾಂಕ್ಷೆ ಯೋಜನೆಯದ ಪಿ ಎಂ ಸ್ವ ನಿಧಿ ಯೋಜನೆಗೆ ಅ. 3 ರಂದು ಹೊಸದುರ್ಗ ದಲ್ಲಿ ಚಾಲನೆ ನೀಡಲಾಗುವುದು ಎಂದು ವಿಧಾನ ಪರಿಷತ್ ಸದಸ್ಯ ಕೆ ಎಸ್ ನವೀನ್ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಸುದ್ಧಿಗಾರರೊಂದಿಗೆ ಮಾತನಾಡಿ ಮೋದಿಜಿ ಯವರ ಈ ಯೋಜನೆಯಿಂದ ಬೀದಿ ಬದಿ ವ್ಯಾಪಾರಿಗಳು, ಪತ್ರಿಕಾ ವಿತರಕರು, ತಳ್ಳುವ ಗಾಡಿಯಲ್ಲಿ ವ್ಯಾಪಾರ ಮಾಡುವವರಿಗೆ ಸಹಾಯವಾಗಲಿದೆ. ಈ ಯೋಜನೆಯ ಪಡೆಯಲು ಬೀದಿ ಬದಿ ವ್ಯಾಪಾರಿಗಳು ಪುರಸಭೆ ಯಲ್ಲಿ ನೀಡಲಾಗುವ ಅರ್ಜಿ ನಮೂನೆಗಳನ್ನು ಪಡೆದು ನೋಂದಣಿ ಮಾಡಿಕೊಳ್ಳಬೇಕು ಎಂದರು.



ಈ ಯೋಜನೆ ಯಲ್ಲಿ ಬೀದಿ ಬದಿ ವ್ಯಾಪಾರಿಗಳು ಮೀಟರ್ ಬಡ್ಡಿ ಯವರಿಂದ ಸಾಲ ಪಡೆಯುವುದು ತಪ್ಪಲಿದೆ. ಪ್ರಾರಂಭಿಕವಾಗಿ 10 ಸಾವಿರ ನೀಡಲಾಗುವುದು ಆದನ್ನು ಮರು ಪಾವತಿ ಮಾಡಿದರೆ 20 ಸಾವಿರ ಈಗೆ 10 ಲಕ್ಷದವರೆಗೆ ಆರ್ಥಿಕ ಸಹಾಯ ಸಿಗಲಿದೆ ಎಂದರು.

ವಿಶ್ವ ಕರ್ಮ ಯೋಜನೆ : ದೋಬಿ ಕೆಲಸಗಾರರು, ಪಾರ್ಲರ್ ಕೆಲಸ, ಮರದ ಕೆಲಸ, ಕೆತ್ತನೆ ಕೆಲಸ, ಈಗೆ ಕರಕುಶಲ ಕರ್ಮಿಗಳಿಗೆ ವಿಶ್ವ ಕರ್ಮ ಯೋಜನೆಯಡಿ 15 ಸಾವಿರ ಆರ್ಥಿಕ ಸಹಾಯ ನೀಡಲಾಗುವುದು ಎಂದರು.

ಈ ಯೋಜನೆಗಳ ಚಾಲನೆ ಕಾರ್ಯಕ್ರಮ ಅ. 3 ರಂದು ಮದ್ಯಾಹ್ನ 3 ಗಂಟೆಗೆ ಪಟ್ಟಣದ ಗುರು ಒಪ್ಪತ್ತಿನ ಸ್ವಾಮಿ ಮಠದ ಸಭಾಂಗಣದಲ್ಲಿ ನಡೆಯಲಿದ್ದು ಕೇಂದ್ರ ಸಚಿವ ಎ ನಾರಾಯಣ ಸ್ವಾಮಿ ಕಾರ್ಯಕ್ರಮ ಕ್ಕೆ ಚಾಲನೆ ನೀಡಲಿದ್ದಾರೆ, ಮಂಡಲದ ಅಧ್ಯಕ್ಷರು, ಜಿಲ್ಲಾ ಪದಾಧಿಕಾರಿಗಳು, ತಾಲ್ಲೂಕಿನ ಪದಾಧಿಕಾರಿಗಳು, ಪುರಸಭಾ ಸದಸ್ಯರು ಭಾಗವಹಿಸಲಿದ್ದಾರೆ.

ಕಾರ್ಯಕ್ರಮ ಕ್ಕೂ ಮುನ್ನ ಬೆಳಿಗ್ಗೆ ಫಲಾನುಭವಿಗಳಿಗೆ ಅರೋಗ್ಯ ತಪಾಸಣೆ ನಡೆಸಲಾಗುವುದು. ಹೊಸದುರ್ಗ ಪಟ್ಟಣದಲ್ಲಿ ಸುಮಾರು 1 ಸಾವಿರ ಜನರಿಗೆ ಈ ಯೋಜನೆ ಯ ಲಾಭ ಕೊಡಿಸುವ ಗುರಿ ಹೊಂದಲಾಗಿದೆ. ಈ ಕಾರ್ಯಕ್ರಮಕ್ಕೆ ಬೀದಿ ಬದಿ ವ್ಯಾಪಾರಿಗಳು ಹೆಚ್ಚಿನ ಸಂಖ್ಯೆ ಯಲ್ಲಿ ಭಾಗವಹಿಸಬೇಕು ಎಂದರು.

ಈ ವೇಳೆ ಮಂಡಲದ ಅಧ್ಯಕ್ಷ ಗೂಳಿಹಟ್ಟಿ ಜಗದೀಶ್, ಗುರುಸ್ವಾಮಿ, ಹನುಮಂತಪ್ಪ, ತಮ್ಮಣ್ಣ ಮುಂತಾದವರು ಹಾಜರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T